BV
ಕನ್ನಡ ದಿನಪತ್ರಿಕೆ
11 ಏಪ್ರಿಲ್ । ಗುರುವಾರ
11 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 45 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ನಮ್ಮ ಯೋಜನೆ, ನಾವು ಮಾಡಿದ ಅಭಿವೃದ್ಧಿಗೆ ಜನ ಜೈ ಅಂದಿದ್ದಾರೆ; ಕ್ಷೇತ್ರಾದ್ಯಂತ ಉತ್ತಮ ಜನ ಬೆಂಬಲ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: ರಾಜ್ಯ ಮತ್ತು ರಾಷ್ಟ್ರದಲ್ಲಿ ಕಾಂಗ್ರೆಸ್ ಮಾಡಿದ ಸಾಧನೆ, ಜಾರಿಗೆ ತಂದಿರುವ ವಿವಿಧ ಯೋಜನೆ ಮತ್ತು ನಾವು ಮಾಡಿರುವ ಅಭಿವೃದ್ಧಿ ಯೋಜನೆಗಳನ್ನು ಜನರು ಮುಕ್ತಕಂಠದಿಂದ ಪ್ರಶಂಸಿಸುತ್ತಿದ್ದಾರೆ. ಬೆಳಗಾವಿ ಲೋಕಸಭಾ ಕ್ಷೇತ್ರದಾದ್ಯಂತ ಕಾಂಗ್ರೆಸ್ ಅಭ್ಯರ್ಥಿಗೆ ಉತ್ತಮ ಬೆಂಬಲ ವ್ಯಕ್ತವಾಗುತ್ತಿದೆ. ಮೇ 7ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಮೃಣಾಲ ಹೆಬ್ಬಾಳಕರ್ ಗೆಲುವು ಖಚಿತ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.



ಕ್ಷೇತ್ರದ ವಿವಿಧ ತಾಲೂಕುಗಳಲ್ಲಿ ಎರಡು ಸುತ್ತಿನ ಪ್ರಚಾರ ಕೈಗೊಂಡ ಬಳಿಕ ಅವರು ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಬೆಳಗಾವಿ ಲೋಕಸಭಾ ಕ್ಷೇತ್ರದ ಎಲ್ಲ ತಾಲೂಕುಗಳಲ್ಲಿ ಪ್ರಚಾರ ಕಾರ್ಯ ನಡೆಸಲಾಗಿದೆ. ಕೆಲವು ತಾಲೂಕುಗಳಲ್ಲಿ ಎರಡು ಸುತ್ತು ಪ್ರಚಾರ ನಡೆಸಲಾಗಿದೆ. ಎಲ್ಲ ಕಡೆ ಕಾರ್ಯಕರ್ತರ ಸಭೆ ಪೂರ್ಣಗೊಂಡಿದೆ. ಜಿಲ್ಲಾ ಪಂಚಾಯಿತಿ ಕ್ಷೇತ್ರವಾರು ಮತ್ತು ಅನೇಕ ಕಡೆ ಹೋಬಳಿ ಮಟ್ಟದಲ್ಲಿ ಸಾರ್ವಜನಿಕ ಸಭೆಗಳನ್ನು ನಡೆಸಲಾಗಿದೆ. ಹೋದಲ್ಲೆಲ್ಲ ಜನರಿಂದ ನಿರೀಕ್ಷೆಗೂ ಮೀರಿ ಬೆಂಬಲ ವ್ಯಕ್ತವಾಗುತ್ತಿದೆ ಎಂದು ಹೆಬ್ಬಾಳಕರ್ ತಿಳಿಸಿದ್ದಾರೆ.

**ಆರತಿ, ಹೂಮಳೆಯ ಸ್ವಾಗತ**

ಕ್ಷೇತ್ರದ 8 ವಿಧಾನಸಭಾ ಕ್ಷೇತ್ರಗಳಲ್ಲೂ ಸ್ಥಳೀಯ ಶಾಸಕರು ಮತ್ತು ಪಕ್ಷದ ಪ್ರಮುಖರ ಉಪಸ್ಥಿತಿಯಲ್ಲಿ ಮೊದಲ ಸುತ್ತಿನಲ್ಲಿ ಕಾರ್ಯಕರ್ತರ ಸಭೆ ನಡೆಸಲಾಗಿದೆ. ನಂತರದಲ್ಲಿ ಮುಖಂಡರ ಜೊತೆ ಜಿಲ್ಲಾ ಪಂಚಾಯಿ ಮಟ್ಟದ ಮತ್ತು ಕೆಲವೆಡೆ ಹೋಬಳಿ ಮಟ್ಟದ ಸಾರ್ವಜನಿಕ ಸಭೆಗಳನ್ನು ನಡೆಸಲಾಗಿದೆ. ಇನ್ನು ಕೆಲವೆಡೆ ರೋಡ್ ಶೋ ನಡೆಸಲಾಗಿದೆ. ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಅವರವರ ವ್ಯಾಪ್ತಿಯಲ್ಲಿ ಪ್ರತಿ ಹಳ್ಳಿ ಹಳ್ಳಿಗೆ ತೆರಳಿ ಪ್ರಚಾರ ನಡೆಸುತ್ತಿದ್ದಾರೆ. ನಾವು ಹೋದಲ್ಲೆಲ್ಲ ಆರತಿ ಬೆಳಗಿ ಸ್ವಾಗತಿಸುತ್ತಿದ್ದಾರೆ. ಊರಲ್ಲೆಲ್ಲ ಮೆರವಣಿಗೆ ಮಾಡಿ ಕಾರ್ಯಕ್ರದ ವೇದಿಕೆಗೆ ಕರೆದುಕೊಂಡು ಹೋಗುತ್ತಿದ್ದಾರೆ. ಎಲ್ಲಿ ನೋಡಿದರೂ ಹೂವಿನ ಮಳೆಗರೆಯುತ್ತಿದ್ದಾರೆ. ಜನರ ಈ ಪ್ರೀತಿ ನೋಡಿದರೆ ನಮ್ಮ ಅಭ್ಯರ್ಥಿ ಗೆಲುವಿನಲ್ಲಿ ಸಂಶಯವೇ ಇಲ್ಲ ಎಂದು ಹೆಬ್ಬಾಳಕರ್ ತಿಳಿಸಿದ್ದಾರೆ.

**ಅಭಿವೃದ್ಧಿ ಮತ್ತು ಗ್ಯಾರಂಟಿಗೆ ಜನರ ಮೆಚ್ಚುಗೆ**

ಕಾಂಗ್ರೆಸ್ ಪಕ್ಷ ದೇಶಕ್ಕೆ ನೀಡಿರುವ ಕೊಡುಗೆ, ಮಾಡಿರುವ ಅಭಿವೃದ್ಧಿ ಮತ್ತು ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಮಾಡುತ್ತಿರುವ ಕೆಲಸ ಹಾಗೂ ಗ್ಯಾರಂಟಿ ಯೋಜನೆಗಳಿಂದ ಜನರು ನೆಮ್ಮದಿ ಕಂಡಿದ್ದಾರೆ. ಹಾಗಾಗಿ ಕಾಂಗ್ರೆಸ್ ಪಕ್ಷಕ್ಕೆ ಜೈ ಎನ್ನುತ್ತಿದ್ದಾರೆ. ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ನಾವು ಮಾಡಿರುವ ಅಭಿವೃದ್ಧಿ ಕೆಲಸಗಳ ಕುರಿತು ಜನರು ತಿಳಿದುಕೊಂಡಿದ್ದು, ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಬೆಳಗಾವಿ ಲೋಕಸಭಾ ಕ್ಷೇತ್ರಕ್ಕೆ ಅಭಿವೃದ್ಧಿ ಮಾಡುವಂತಹ ಸಂಸದ ಬೇಕಾಗಿದ್ದಾರೆ.

ನಮಗೆ ಸ್ಥಳೀಯರು ಮತ್ತು ಅಭಿವೃದ್ಧಿಪರರ ಬೇಕಾಗಿದ್ದಾರೆ. ಜಿಲ್ಲೆಯ ಸ್ವಾಭಿಮಾನ ಮತ್ತು ಕ್ಷೇತ್ರದ ಅಭಿವೃದ್ಧಿ ಬೇಕಾಗಿದೆ.

ಹಾಗಾಗಿ ನಾವು ಈ ಬಾರಿ ಬೇರೆ ಏನನ್ನೂ ಯೋಚಿಸದೆ ಕಾಂಗ್ರೆಸ್ ಅಭ್ಯರ್ಥಿಗೆ ಮತ ನೀಡುತ್ತೇವೆ ಎಂದು ಜನರು ಸ್ವಯಂ ಪ್ರೇರಿತರಾಗಿ ಹೇಳುತ್ತಿದ್ದಾರೆ. ಇದು ನಮ್ಮಲ್ಲಿ ಇನ್ನಷ್ಟು ಉತ್ಸಾಹ ಮತ್ತು ವಿಶ್ವಾಸ ಮೂಡಿಸಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

2ನೇ ಪುಟಕ್ಕೆ}

## ಇಡಿ ಬಂಧನ: ಸುಪ್ರೀಂ ಮೊರೆ ಹೋದ ದಿಲ್ಲಿ ಸಿಎಂ ಕೇಜ್ರಿವಾಲ್



ದೆಹಲಿ: ಇಡಿ ಬಂಧನವನ್ನು ಪ್ರಶ್ನಿಸಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ದೆಹಲಿ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು. ಆದ್ರೆ ಈಗ ಅರ್ಜಿಯನ್ನು ಹೈಕೋರ್ಟ್ ತಿರಸ್ಕರಿಸಿದೆ. ಅರವಿಂದ್ ಕೇಜ್ರಿವಾಲ್ ಇದೀಗ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದ್ದಾರೆ.

ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯವು ಮಾರ್ಚ್ 21 ರಂದು ಕೇಜ್ರಿವಾಲ್ ಅವರನ್ನು ಬಂಧಿಸಿತ್ತು. ತನ್ನ ಬಂಧನದ ವಿರುದ್ಧ ಕೇಜ್ರಿವಾಲ್ ಮಾಡಿದ ಮನವಿಯನ್ನು ದೆಹಲಿ ಹೈಕೋರ್ಟ್ ಮಂಗಳವಾರ ತಿರಸ್ಕರಿಸಿದೆ.

ಕೇಜ್ರಿವಾಲ್ ಅವರ ಬಂಧನವು ಯಾವುದೇ ಕಾನೂನನ್ನು ಉಲ್ಲಂಘಿಸಿಲ್ಲ ಮತ್ತು ಅವರ ಬಂಧನವನ್ನು ಕಾನೂನುಬಾಹಿರವೆಂದು ಪರಿಗಣಿಸಲಾಗುವುದಿಲ್ಲ ಎಂದು ಹೈಕೋರ್ಟ್ ಹೇಳಿದೆ.

ಈ ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸುವ ಹಕ್ಕು ಅರವಿಂದ್ ಕೇಜ್ರಿವಾಲ್‌ಗೆ ಇದೆ ಎಂದು ದೆಹಲಿ ಸಿಎಂ ಪರ ವಕೀಲ ರಿಷಿಕೇಶ್ ಕುಮಾರ್ ಹೇಳಿದ್ದಾರೆ.

ಅರವಿಂದ್ ಕೇಜ್ರಿವಾಲ್ ಅವರ ಅಕ್ರಮ ಬಂಧನವನ್ನು ನಾವು ಪ್ರಶ್ನಿಸಿದ್ದೇವೆ. ಬಂಧನ ವಾರಂಟ್ ಕಾನೂನುಬದ್ಧವಾಗಿದೆ ಎಂದು ಹೈಕೋರ್ಟ್ ತೀರ್ಪು ನೀಡಿದೆ. ಅವರನ್ನು ಬಂಧಿಸುವ ಅಧಿಕಾರ ಇಡಿಗೆ ಇದೆ. ಈ ತೀರ್ಪನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನ ಮೊರೆ ಹೋಗಬಹುದು ಎಂದು ರಿಷಿಕೇಶ್ ಕುಮಾರ್ ಹೇಳಿದ್ದಾರೆ.

## ಈಶ್ವರಪ್ಪ ವಿರುದ್ಧ ಚುನಾವಣಾ ಆಯೋಗಕ್ಕೆ ದೂರು ನೀಡಿದ ಬಿಜೆಪಿ



ಬೆಂಗಳೂರು: ಲೋಕಸಭೆ ಚುನಾವಣೆಗೆ ತಮ್ಮ ಮಗನಿಗೆ ಟಿಕೆಟ್ ನೀಡಿಲ್ಲವೆಂದು ಬಂಡಾಯ ಎದ್ದಿರುವ ಮಾಜಿ ಸಚಿವ ಕೆಎಸ್ ಈಶ್ವರಪ್ಪ ಅವರು ಶಿವಮೊಗ್ಗ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದಾರೆ.

ಈ ವೇಳೆ ಅವರು ಮೋದಿ ಅವರ ಭಾವಚಿತ್ರ ಹಾಗೂ ಹೆಸರನ್ನು ಬಳಸಿದಂತೆ ನಿರ್ಬಂಧಿಸಿ ಇದೀಗ ಬಿಜೆಪಿಯು ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಿದೆ.

ಚುನಾವಣಾ ವೇಳೆ ಮೋದಿ ಭಾವಚಿತ್ರ ಹೆಸರು ಬಳಕೆಗೆ ಕೆಎಸ್ ಈಶ್ವರಪ್ಪಗೆ ನಿರ್ಬಂಧ ವಿಧಿಸುವಂತೆ ಕೋರಿ ಚುನಾವಣಾ ಆಯೋಗಕ್ಕೆ ಇದೀಗ ಬಿಜೆಪಿ ದೂರು ಸಲ್ಲಿಸಿದೆ. ರಾಜ್ಯ ಬಿಜೆಪಿ ಘಟಕದ ಪ್ರಧಾನ ಕಾರ್ಯದರ್ಶಿ ಪಿ ರಾಜೀವ್ ವಿಧಾನ ಪರಿಷತ್ ಸದಸ್ಯ ಚಲವಾದಿ ನಾರಾಯಣ ಸ್ವಾಮಿ ನೇತೃತ್ವದಲ್ಲಿ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಲಾಗಿದೆ ಎಂದು ತಿಳಿದುಬಂದಿದೆ.

ಈಶ್ವರಪ್ಪ ಚುನಾವಣಾ ಪ್ರಚಾರಕ್ಕೆ ಮೋದಿ ಫೋಟೋ ಬಳಸುತ್ತಿದ್ದಾರೆ. ಮೋದಿ ಭಾವಚಿತ್ರ ಬಳಸದಂತೆ ನಿರ್ಬಂಧಿಸಲು ಕೋರಿ ಚುನಾವಣಾ ಆಯೋಗಕ್ಕೆ ದೂರು ನೀಡಲಾಗಿದೆ. ಕೆಎಸ್ ಈಶ್ವರಪ್ಪ ಹೀಗೆ ಮುಂದುವರೆದರೆ ಅವರ ವಿರುದ್ಧ ಕಾನೂನು ಕ್ರಮ ಆಗುತ್ತದೆ. ಈಶ್ವರಪ್ಪ ಅವರು ಪಕ್ಷದ ಅಭ್ಯರ್ಥಿ ಅಲ್ಲದ ಕಾರಣ ಮೋದಿ ಅವರ ಭಾವಚಿತ್ರ ಬಿಜೆಪಿ ಚಿನ್ಹೆ ಬಳಸುವ ಅಧಿಕಾರ ಕೆ ಎಸ್ ಈಶ್ವರಪ್ಪ ಅವರಿಗೆ ಇರುವುದಿಲ್ಲ ಎಂದು ಚುನಾವಣಾ ಆಯೋಗಕ್ಕೆ ದೂರು ನೀಡಿದ ಬಳಕ ಎಂಎಲ್‌ಸಿ ಛಲುವಾದಿ ನಾರಾಯಣಸ್ವಾಮಿ ಹೇಳಿದರು.


## ಪಿಯುಸಿ ಪರೀಕ್ಷೆಯಲ್ಲಿ ಅಮ್ಮ-ಮಗಳ ಸಾಧನೆ



ಕೊಡಗು: 2023–24ನೇ ಸಾಲಿನ ದ್ವಿತೀಯ ಪಿಯುಸಿ ಫಲಿತಾಂಶ ಇಂದು ಹೊರಬಿದ್ದಿದೆ. ಈ ಬಾರಿ 6 ಲಕ್ಷದ 81 ಸಾವಿರದ 79 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಇದರಲ್ಲಿ 5 ಲಕ್ಷದ 52 ಸಾವಿರದ 690 ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. ಪಿಯುಸಿ ಪರೀಕ್ಷೆಯಲ್ಲಿ ಕೊಡಗಿನ ತಾಯಿ ಮಗಳು ಉತ್ತೀರ್ಣರಾಗುವ ಮೂಲಕ ಅಮೋಘ ಸಾಧನೆ ಮಾಡಿದ್ದಾರೆ. ಕೊಡಗು ಜಿಲ್ಲೆ ಚೆಟ್ಟಳ್ಳಿಯ ತಾಯಿ ಬೇಬಿರಾಣಿ ಹಾಗೂ ಮಗಳು ರಿನಿಶಾ ಈ ಬಾರಿ ದ್ವಿತೀಯ ಪಿಯು ಪರೀಕ್ಷೆ ಬರೆದ್ದಿದ್ದರು. ಮಗಳು ರಿನಿಶಾ 600ಕ್ಕೆ 570 ಅಂಕ ಪಡೆದು ಡಿಸ್ಟಿಂಕ್ಷನ್‌ನಲ್ಲಿ ಪಾಸ್ ಆಗಿದ್ದಾರೆ. ತಾಯಿ ಬೇಬಿರಾಣಿ 600ಕ್ಕೆ 388 ಅಂಕ ಪಡೆದು ಫಸ್ಟ್ ಕ್ಲಾಸ್‌ನಲ್ಲಿ ಪಾಸ್ ಆಗಿದ್ದಾರೆ.

ಮಗಳು ರಿನಿಶಾ ಗೋಣಿಕೊಪ್ಪದ ಪಿಯು ಕಾಲೇಜಿನಲ್ಲಿ ಓದಿದ್ದರು. ತಾಯಿ ಬೇಬಿರಾಣಿ ನೆಲ್ಲಿಹುದಿಕೇರಿ ಕಾಲೇಜು ಸೇರಿದ್ದರು. ಇಂದು ಬಂದ ಫಲಿತಾಂಶದಲ್ಲಿ ತಾಯಿ ಮಗಳು ಇಬ್ಬರೂ ಪಾಸ್ ಆಗಿದ್ದಾರೆ.

## ರಾಜ್ಯದ ಶೇ81.15 ವಿದ್ಯಾರ್ಥಿಗಳು ಉತ್ತೀರ್ಣ



ಬೆಂಗಳೂರು: 2023–24ನೇ ಸಾಲಿನ ದ್ವಿತೀಯ ಪಿಯುಸಿ ಫಲಿತಾಂಶ ಇಂದು ಪ್ರಕಟವಾಗಿದೆ. ರಾಜ್ಯದಲ್ಲಿ ಒಟ್ಟು ಶೇ 81.15 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

6,81,079 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಅವರಲ್ಲಿ 5,52,690 ಮಂದಿ ತೇರ್ಗಡೆಯಾಗಿದ್ದಾರೆ.

ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಶೇ 97.37 ಸಾಧನೆ ಮಾಡುವ ಮೂಲಕ ದಕ್ಷಿಣ ಕನ್ನಡ ಜಿಲ್ಲೆ ಪ್ರಥಮ ಸ್ಥಾನ ಪಡೆದಿದೆ.

**ದಕ್ಷಿಣ ಕನ್ನಡ ಜಿಲ್ಲೆಗೆ ಪ್ರಥಮ ಸ್ಥಾನ**

ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಪ್ರಥಮ ಸ್ಥಾನ ಕಾಯ್ದುಕೊಂಡಿದೆ.

### ಫಲಿತಾಂಶದ ಅಂಕಿಅಂಶಗಳು

- ದ್ವಿತೀಯ ಪಿಯುಸಿ ಪರೀಕ್ಷೆ–1ನ್ನು ದಿನಾಂಕ: 01–03–2024 ರಿಂದ 22–03–2024 ರವರೆಗೆ ಒಟ್ಟು 1124 ಪರೀಕ್ಷಾ ಕೇಂದ್ರಗಳಲ್ಲಿ ರಾಜ್ಯಾದಂತ ನಡೆಸಲಾಯಿತು.
- ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು ಒಟ್ಟು 70 ಮೌಲ್ಯಮಾಪನ ಕೇಂದ್ರಗಳಲ್ಲಿ ದಿನಾಂಕ 25/03/2024 ರಿಂದ 03/04/2024 ರವರೆಗೆ 27,650 ಮೌಲ್ಯಮಾಪಕರಿಂದ ನಡೆಸಲಾಯಿತು.
- ಪರೀಕ್ಷೆಗೆ ಅರ್ಹರಾದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ: 6,98378
- ಎಲ್ಲಾ ವಿಷಯಗಳಿಗೆ ಗೈರುಹಾಜರಾದ ವಿದ್ಯಾರ್ಥಿಗಳ ಸಂಖ್ಯೆ: 17,299
- ಪರೀಕ್ಷೆಗೆ ಹಾಜರಾದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ: 6,81,079
- ತೇರ್ಗಡೆಯಾದ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ: 5,52,690
- 2024ರಲ್ಲಿ ಶೇಕಡವಾರು ಉತ್ತೀರ್ಣತಾ ಪ್ರಮಾಣ 81.15% ಇದ್ದು, ಇದು 2023ರ ವರ್ಷದ ಉತ್ತೀರ್ಣತಾ ಪ್ರಮಾಣ 74.67% ಗಿಂತ 6.48%ರಷ್ಟು ಹೆಚ್ಚಿದೆ.

ಜಿಲ್ಲೆಯಲ್ಲಿ ಈ ಬಾರಿ ಶೇ 97.37 ಫಲಿತಾಂಶ ದಾಖಲಾಗಿದೆ.

21–22ನೇ ಸಾಲಿನಿಂದ ಸತತವಾಗಿ ದಕ್ಷಿಣ ಕನ್ನಡ ಜಿಲ್ಲೆ ರಾಜ್ಯದಲ್ಲಿ ಪ್ರಥಮ ಸ್ಥಾನದಲ್ಲಿದೆ.

2022–23 ನೆ ಸಾಲಿನಲ್ಲಿ ಜಿಲ್ಲೆಯಲ್ಲಿ ಶೇ 95.33 ಫಲಿತಾಂಶ, 2021–22 ನೇ ಸಾಲಿನಲ್ಲಿ ಶೇ 88.02 ಫಲಿತಾಂಶ ದಾಖಲಾಗಿತ್ತು. ಕೋವಿಡ್ 19 ಸಾಂಕ್ರಾಮಿಕದ ಕಾರಣಕ್ಕೆ 2020–21ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆ ರದ್ದುಗೊಂಡಿತ್ತು.

## ಪ್ರಚಾರದ ವೇಳೆ ಮಹಿಳೆಗೆ ಕಿಸ್ ಕೊಟ್ಟ ಬಿಜೆಪಿ ಅಭ್ಯರ್ಥಿ



ಪಶ್ಚಿಮ ಬಂಗಾಳ: ಲೋಕ ಸಭಾ ಚುನಾವಣೆಗಾಗಿ ಭರ್ಜರಿ ಮತ ಪ್ರಚಾರ ನಡೆಯುತ್ತಿದೆ. ಈಗಾಗಲೇ ಅಭ್ಯರ್ಥಿಗಳು ಮತ ಯಾಚನೆ ಮಾಡುತ್ತಿದ್ದು, ಇಲ್ಲೊಬ್ಬ ಬಿಜೆಪಿ ಅಭ್ಯರ್ಥಿ ವಿಶೇಷ ರೀತಿಯಲ್ಲಿ ಮತಯಾಚಣೆ ಮಾಡಿ ಎಡವಟ್ಟು ಮಾಡಿಕೊಂಡಿದ್ದಾರೆ.

ಮಾಲ್ಡಾ ಉತ್ತರ ಕ್ಷೇತ್ರದಿಂದ ಲೋಕಸಭೆ ಚುನಾವಣೆಗೆ 2ನೇ ಬಾರಿಗೆ ಸ್ಪರ್ಧಿಸುತ್ತಿರುವ ಬಿಜೆಪಿ ಸಂಸದ ಖಗೇನ್ ಮುರ್ಮು ಚಂಚಲ್‌ನಲ್ಲಿರುವ ಸಿಹಿಪುರ್ ಗ್ರಾಮದಲ್ಲಿ ಮನೆ ಮನೆಗೆ ತೆರಳಿ ಪ್ರಚಾರ ಮಾಡ್ತಿದ್ದ ವೇಳೆ ಖಗೇನ್ ಮುರ್ಮು ಮಹಿಳೆಯೊಬ್ಬರ ಕೆನ್ನೆಗೆ ಮುತ್ತು ಕೊಟ್ಟಿದ್ದಾರೆ.

ಸದ್ಯ ಈ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡ್ತಿದ್ದು, ಟಿಎಮ್ಸಿ ನಾಯಕರು ಸೇರಿದಂತೆ ಪ್ರತಿಪಕ್ಷಗಳ ನಾಯಕರು ಖಗೇನ್ ಮುರ್ಮು ನಡೆಯನ್ನ ಖಂಡಿಸಿದ್ದಾರೆ. ಬಗೆ ಬಗೆಯ ಕಾಮೆಂಟ್ ಬರೆಯುತ್ತಿದ್ದಾರೆ.

ಟಿಎಂಸಿ ಈ ಬಗ್ಗೆ ಖಂಡಿಸಿದ್ದು, 'ಮಹಿಳಾ ಕುಸ್ತಿಪಟುಗಳಿಗೆ ಲೈಂಗಿಕ ಕಿರುಕುಳ ನೀಡುವ ಸಂಸದರಿಂದ ಹಿಡಿದು ಬಂಗಾಳಿ ಮಹಿಳೆಯರ ಬಗ್ಗೆ ಅಶ್ಲೀಲ ಹಾಡುಗಳನ್ನು ಹಾಡುವ ನಾಯಕವರೆಗೆ ಬಿಜೆಪಿಯಲ್ಲಿ ಮಹಿಳಾ ವಿರೋಧಿ ರಾಜಕಾರಣಿಗಳೇನು ಕೊರತೆಯಿಲ್ಲ. ನಾರಿ ಕಾ ಸಮ್ಮಾನ್ನಲ್ಲಿ ಮೋದಿ ಕಾ ಪರಿವಾರ್ ತೊಡಗಿಸಿಕೊಂಡಿರೋದು ಹೀಗೆ' ಎಂದು ಬರೆದುಕೊಂಡಿದ್ದಾರೆ. ಸದ್ಯ ಸಂಸದ ಖಗೇನ್ ಮುರ್ಮು ಮಾಡಿಕೊಂಡ ಎಡವಟ್ಟು ಸಖತ್ ವೈರಲ್ ಆಗುತ್ತಿದೆ.

## ದಿಂಗಾಲೇಶ್ವರ ಶ್ರೀಗಳ ಸ್ಪರ್ಧೆ ಮೊದಲೇ ಗೊತ್ತಿದ್ದರೆ ಅವರಿಗೆ ಟಿಕೆಟ್ ನೀಡುತ್ತಿದ್ದೆವು: ಮಾಜಿ ಸಚಿವ ವಿನಯ್ ಕುಲಕರ್ಣಿ

ಬೆಂಗಳೂರು: ಧಾರವಾಡ ಕ್ಷೇತ್ರದಿಂದ ಲೋಕಸಭೆ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಫಕೀರ ದಿಂಗಾಲೇಶ್ವರ ಶ್ರೀಗಳು ಸ್ಪರ್ಧಿಸುವ ವಿಚಾರಕ್ಕೆ ಸಂಬಂಧಿಸಿದಂತೆ ಇಂದು ಬೆಂಗಳೂರಿನಲ್ಲಿ ಕಾಂಗ್ರೆಸ್ಸಿನ ಮಾಜಿ ಸಚಿವ ವಿನಯ್ ಕುಲಕರ್ಣಿ ಅವರು ಪ್ರತಿಕ್ರಿಯೆ ನೀಡಿದ್ದು, ಶ್ರೀಗಳ ಸ್ಪರ್ಧೆ ಕುರಿತಂತೆ ಮೊದಲೇ ನಮಗೆ ಮಾಹಿತಿ ಇದ್ದರೆ ಕಾಂಗ್ರೆಸ್ ಪಕ್ಷದಿಂದ ಅವರಿಗೆ ಆ ಕ್ಷೇತ್ರದಲ್ಲಿ ಟಿಕೆಟ್ ಕೊಡುತ್ತಿದ್ದೆವು ಎಂದು ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವಾಮೀಜಿ ಸ್ಪರ್ಧಿಸುತ್ತಾರೆ ಅನ್ನೋದು ನಮಗೆ ಗೊತ್ತಿರಲಿಲ್ಲ.



ಮೊದಲೆ ಗೊತ್ತಿದ್ದರೆ ನಾವೇ ಅವ–ರಿಗೆ ಟಿಕೆಟ್ ಕೊಡುತ್ತಿದ್ದೆವು ಎಂದು ಬೆಂಗಳೂರಿನಲ್ಲಿ ಮಾಜಿ ಸಚಿವ ವಿನಯ್ ಕುಲಕರ್ಣಿ ಹೇಳಿಕೆ ನೀಡಿದ್ದಾರೆ ಧಾರವಾಡದಲ್ಲಿ ಹಿಟ್ಲರ್ ಆಡಳಿತ ಆಗಿಬಿಟ್ಟಿದೆ. ಸ್ವಾಮೀ–ಜಿಗಳು ಅನ್ಯಾಯದ ವಿರುದ್ಧ ಹೋರಾಡುತ್ತಿದ್ದಾರೆ. ಸ್ವಾಮೀ–ಜಿಗಳ ನಿರ್ಧಾರ ಒಳ್ಳೆಯ ನಿರ್ಧಾರ ಎಂದು ಸಚಿವ ವಿನಯ್ ಕುಲಕರ್ಣಿ ತಿಳಿಸಿದರು.

ನಮ್ಮ ಜಿಲ್ಲೆಯಲ್ಲಿ ಹಿಟ್ಲರ್ ಪರಿಸ್ಥಿತಿ ನಿರ್ಮಾಣವಾಗಿದೆ. ಸ್ವಾಮೀ–ಜಿಗಳು ಲೋಕಸಭಾ ಚುನಾವಣೆಗೆ ಸ್ಪರ್ಧಿಸುವುದಕ್ಕೆ ನಾನು ಅವರಿಗೆ ಧನ್ಯವಾದ ಹೇಳುತ್ತೇನೆ.ಸಮಾಜದಲ್ಲಿ ಬದಲಾವಣೆ ತರಲು ಇಂಥ ಸ್ವಾಮೀಜಿಗಳು ಬೇಕೇ ಬೇಕು. ಈ ರೀತಿ ಚುನಾವಣೆಗೆ ಸ್ಪರ್ಧಿಸುತ್ತಾರೆ ಎಂದು ಗೊತ್ತಿದ್ದರೆ ಅವರಿಗೆ ಟಿಕೆಟ್ ನೀಡುತ್ತಿದ್ದೆವು ಎಂದು ಅವರು ತಿಳಿಸಿದರು. ಲಿಂಗಾಯತ ಸಮಾಜಕ್ಕೆ ಅನ್ಯವಾಗುತ್ತಿರುವ ಕುರಿತಂತೆ ಪ್ರತಿಕ್ರಿಯೆ ನೀಡಿದ ಅವರು ಬಿಜೆಪಿ ಪಕ್ಷದಲ್ಲೇ ಇರುವಂತಹ ನಮ್ಮ ಸಮಾಜದ ಹಲವು ನಾಯಕರಿಗೆ ಮುಖಂಡ–ರಿಗೆ ಬಹಳ ಅನ್ಯಾಯವಾಗಿದೆ. ಆದರೆ ಅವರಿಗೆ ಬಾಯಿ ಬಿಟ್ಟು ಮಾತನಾಡುವ ಅವಕಾಶ ಇಲ್ಲ. ಇದರಿಂದ ಬಹಳಷ್ಟು ಜನರು ಬಿಜೆಪಿ ಪಕ್ಷದಲ್ಲಿ ನೊಂದಿದ್ದಾರೆ. ಹಾಗಾಗಿ ದಿಂಗಾಲೇಶ್ವರ ಸ್ವಾಮೀ–ಜಿಗಳು ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವುದರಿಂದ ಅವ–ರಿಗೆ ಧನ್ಯವಾದ ತಿಳಿಸುತ್ತೇನೆ ಎಂದು ವಿನಯ್ ಕುಲಕರ್ಣಿ ಅವರು ತಿಳಿಸಿದರು.



## ಭಾರತದ ಒಂದಿಂಚು ಭೂಮಿಯನ್ನೂ ಚೀನಾ ಅತಿಕ್ರಮಿಸಲು ಸಾಧ್ಯವಿಲ್ಲ: ಅಮಿತ್ ಶಾ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ಅಡಿಯಲ್ಲಿ ಚೀನಾ ಒಂದು ಇಂಚು ಭೂಮಿಯನ್ನು ಆಕ್ರಮಿಸಲು ಸಾಧ್ಯವಿಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಅಸ್ಸಾಂನ ಲಖಿಂಪುರದಲ್ಲಿ ಚುನಾವಣಾ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ಅಮಿತ್ ಶಾ, ಗಡಿ ವಿಚಾರದಲ್ಲಿ ಕೇಂದ್ರ ಮೋದಿ ಸರ್ಕಾರ ಸಾಕಷ್ಟು ಪರಿಣಾಮಕಾರಿ ಕ್ರಮಗಳನ್ನು ಕೈಗೊಂಡಿದ್ದು, ಭಾರತದ ಒಂದಿಂಚು ಭೂಮಿಯನ್ನೂ ಚೀನಾ ಅತಿಕ್ರಮಿಸಲು ಸಾಧ್ಯವಿಲ್ಲ. ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರವು ಬಾಂಗ್ಲಾದೇಶದೊಂದಿಗಿನ ದೇಶದ ಗಡಿಯನ್ನು ಭದ್ರಪಡಿಸಿದೆ ಮತ್ತು ಒಳನುಸುಳುವಿಕೆಯನ್ನು ನಿಲ್ಲಿಸಿದೆ ಎಂದು ಹೇಳಿದರು.

ಮಾಜಿ ಪ್ರಧಾನಿ ಜವಾಹರಲಾಲ್ ನೆಹರು 1962 ಚೀನಾದ ಆಕ್ರಮಣದ ವೇಳೆ ಅಸ್ಸಾಂ ಮತ್ತು ಅರುಣಾಚಲ ಪ್ರದೇಶಕ್ಕೆ ಹೇಗೆ ಬೈ–ಬೈ ಹೇಳಿದರು ಎಂಬುದನ್ನು ಜನರು ಎಂದಿಗೂ ಮರೆಯುವುದಿಲ್ಲ ಎಂದು ಹೇಳಿದರು.ರಾಜ್ಯದ ಜನತೆಗೆ "ಅನ್ಯಾಯ" ವನ್ನು ಮಾಡಿದೆ ಮತ್ತು ವಿಭಿನ್ನ ಹಿಂಸಾತ್ಮಕ ಚಳುವಳಿಗಳು ಮತ್ತು ದಂಗೆ–ಸಂಬಂಧಿತ ಘಟನೆಗಳಿಂದ ಕೊಲ್ಲಲ್ಪಟ್ಟ ಹಲವಾರು ಜನರಿಗೆ ಅನ್ಯಾಯವಾಗಿದೆ ಆರೋಪಿಸಿದರು.

## ಬೆಳಗಾವಿ ಹಲವು ಕಡೆ ಮಳೆ

ಬೆಳಗಾವಿ: ಕಡುಬಿಸಿಲಿನ ತಾಪಕ್ಕೆ ಬೆಂಡಾದ ಬೆಳಗಾವಿಗೆ ಜನತೆಗೆ ಬುಧವಾರ ಮಳೆರಾಯ ತಂಪೆರೆದಿದ್ದಾನೆ. ಯುಗಾದಿ ಹಬ್ಬದ ಮೊದಲ ಉಡುಗೂರೆ ಎಂದು ಕುಂದಾನಗರಿ ಜನರು ಖುಷಿ ವ್ಯಕ್ತಪಡಿಸಿದ್ದಾರೆ.

ಮಳೆರಾಯನಿಗಾಗಿ ಬೆಳಗಾವಿ ಜಿಲ್ಲೆಯ ಜನತೆ ಆಕಾಶದೆತ್ತರ ಮುಖಮಾಡಿದರು. ಕಡು ಬಿಸಿಲಿನ ತಾಪಕ್ಕೆ ವರುಣನ ಮೇಲೆ ಕೊಪ ಕೂಡ ಮಾಡಿಕೊಂಡಿದರು. ಆದರೆ, ಇಂದು ಏಕಾಏಕಿ ವರುಣ ಕೃಪೆ ತೋರಿದ್ದು, ಇಲ್ಲಿನ ಜನರು ಅಪಾರ ಸಂತಸ ವ್ಯಕ್ತಪಡಿಸಿದ್ದಾರೆ. ಇನ್ನು ಬೆಳಗಾವಿ ವ್ಯಾಪ್ತಿಯ ಹಲವೆಡೆ ಸಾಧಾರಣ ಮಳೆ ಸು–ರಿದಿದೆ.

ಸುಮಾರು 15 ನಿಮಿಷಗಳ ಕಾಲ ಮಳೆರಾಯ ತನ್ನ ಆರ್ಭಟ ತೋರಿ ಮಿಂಚಿನಂತೆ ಮಾಯಾವಾಗಿದ್ದಾನೆ. ಬಿಸಿಲ ಝಳದಿಂದ ಬಸವಳಿದಿರುವ ಜನರಿಗೆ ಮಳೆರಾಯ ಸ್ವಲ್ಪ ನೆಮ್ಮದಿ ತಂದಿದ್ದಾನೆ. ಬರಗಾಲದಲ್ಲೂ ವರುಣನ ಆಗಮನ ಖುಷಿ ತಂದಿದೆ.

## ತಮಿಳುನಾಡು: ಕಾಂಗ್ರೆಸ್, ಡಿಎಂಕೆ ದೇಶವನ್ನು ಕತ್ತಲೆಯಲ್ಲಿಟ್ಟಿವೆ, ಮಹಿಳೆಯರನ್ನು ಕೆಟ್ಟದಾಗಿ ನಡೆಸಿಕೊಂಡಿವೆ; ಪ್ರಧಾನಿ ಮೋದಿ

ವೆಲ್ಲೂರು: ಕಚ್ಚತೀವು ಮತ್ತು ಶಕ್ತಿ ಹೇಳಿಕೆಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಬುಧವಾರ ಕಾಂಗ್ರೆಸ್ ಮತ್ತು ತಮಿಳುನಾಡಿನ ಆಡಳಿತಾರೂಢ ಡಿಎಂಕೆ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ದೇಶವನ್ನು ಕತ್ತಲೆಯಲ್ಲಿಟ್ಟಿದ್ದಾರೆ ಮತ್ತು ಮಹಿಳೆಯರನ್ನು ಕೆಟ್ಟದಾಗಿ ನಡೆಸಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ.

ಏಪ್ರಿಲ್ 19 ರಂದು ರಾಜ್ಯದಲ್ಲಿ ನಡೆಯಲಿರುವ ಲೋಕಸಭೆ ಚುನಾವಣೆ ಅಂಗವಾಗಿ ಬಿಜೆಪಿ ಮತ್ತು ಎನ್‌ಡಿಎ ಅಭ್ಯರ್ಥಿಗಳ ಪರವಾಗಿ ಮತಯಾಚಿಸುವ ರ್ಯಾಲಿಯಲ್ಲಿ ಮಾತನಾಡಿದ ಅವರು, 'ಭ್ರಷ್ಟಾಚಾರದ ಮೊದಲ ಹಕ್ಕುಸ್ವಾಮ್ಯವನ್ನು ಡಿಎಂಕೆ ಹೊಂದಿದೆ, ಇಡೀ ಕುಟುಂಬ ತಮಿಳುನಾಡನ್ನು ಲೂಟಿ ಮಾಡುತ್ತಿದೆ. ಡಿಎಂಕೆಯು 'ಕುಟುಂಬ ಕಂಪನಿ'ಯಾಗಿದ್ದು, ತನ್ನ 'ಹಳೆಯ ಮನಸ್ಥಿತಿ'ಯಿಂದ ರಾಜ್ಯದ ಯುವಕರ ಪ್ರಗತಿಯನ್ನು ತಡೆಯುತ್ತಿದೆ' ಎಂದರು.

'ಡಿಎಂಕೆ ಜನರನ್ನು ಭಾಷೆ, ಪ್ರದೇಶ, ನಂಬಿಕೆ ಮತ್ತು ಜಾತಿ ಆಧಾರದ ಮೇಲೆ ವಿಭಜಿಸುತ್ತದೆ. ಜನರಿಗೆ ಇದು ತಿಳಿದ ನಂತರ ಒಂದೇ ಒಂದು ಮತವನ್ನು ನಮಗೆ ನೀಡುವುದಿಲ್ಲ ಎಂಬುದು ಡಿಎಂಕೆಗೆ ತಿಳಿದಿದೆ. ನಾನು ಡಿಎಂಕೆಯ ದಶಕಗಳ ಅಪಾಯಕಾರಿ ರಾಜಕೀಯವನ್ನು ಬಹಿರಂಗಪಡಿಸಲು ನಿರ್ಧರಿಸಿದ್ದೇನೆ. ಬಿಜೆಪಿ ದ್ರಾವಿಡರ ಹೃದಯದಲ್ಲಿ ಗಮನಾರ್ಹ ಸ್ಥಾನ



ಪಡೆಯಲು ಉತ್ಸಾಹಭರಿತ ಹೋರಾಟ ಮಾಡುತ್ತಿದೆ' ಎಂದು ಮೋದಿ ಹೇಳಿದರು.

1974ರಲ್ಲಿ ಕಚ್ಚತೀವು ದ್ವೀಪವನ್ನು ಶ್ರೀಲಂಕಾಕ್ಕೆ ಬಿಟ್ಟುಕೊಟ್ಟಾಗ ಕೇಂದ್ರ ಮತ್ತು ರಾಜ್ಯದಲ್ಲಿ ಕ್ರಮವಾಗಿ ಅಧಿಕಾರದಲ್ಲಿದ್ದ ಕಾಂಗ್ರೆಸ್ ಮತ್ತು ಡಿಎಂಕೆಯನ್ನು ಮತ್ತೊಮ್ಮೆ ಗುರಿಯಾಗಿಸಿದ ಅವರು, ಯಾವ ಕ್ಯಾಬಿನೆಟ್ ಸಭೆಯಲ್ಲಿ ಇಂತಹ ನಿರ್ಧಾರಕ್ಕೆ ಬಂದರು ಮತ್ತು ಯಾರಿಗೆ ಲಾಭ ಮಾಡಿಕೊಡಲು. ಈ ಪ್ರಶ್ನೆಗಳಿಗೆ ಕಾಂಗ್ರೆಸ್ ಉತ್ತರ ನೀಡಿಲ್ಲ ಎಂದರು.

ಕಚ್ಚತೀವು ದ್ವೀಪವನ್ನು ಬಿಟ್ಟುಕೊಟ್ಟ ನಂತರ, ತಮಿಳುನಾಡಿನ ಮೀನುಗಾರರನ್ನು ಬಂಧಿಸಲಾಯಿತು ಮತ್ತು ಅವರ ದೋಣಿಗಳನ್ನು ವಶಪಡಿಸಿಕೊಳ್ಳಲಾಯಿತು. ಇದೀಗ ಕಾಂಗ್ರೆಸ್ ಮತ್ತು ಡಿಎಂಕೆ ಅವರ (ಮೀನುಗಾರರ) ಮೇಲೆ ನಕಲಿ ಸಹಾನುಭೂತಿ ತೋರಿಸುತ್ತವೆ. ಎನ್‌ಡಿಎ ಸರ್ಕಾರವು ಮೀನುಗಾರರ ಬಂಧನ ಅಥ–'ವಾ ಜೈಲುವಾಸದ ಪರಿಸ್ಥಿತಿಯಿಂದ ಶಾಶ್ವತವಾಗಿ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ ಎಂದ ಅವರು, ಶ್ರೀಲಂಕಾದಲ್ಲಿ ಗಲ್ಲು ಶಿಕ್ಷೆಗೆ ಗು–ರಿಯಾಗಿದ್ದ ಐವರು ಭಾರತೀಯ ಮೀನುಗಾರರ ರಕ್ಷಣೆಯನ್ನು ಉಲ್ಲೇಖಿಸಿದರು.

'ರಾಜಕುಮಾರ ರಾಹುಲ್ ಗಾಂಧಿಯವರ' ಶಕ್ತಿ ಟೀಕೆಗಳ ಬಗ್ಗೆ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ ಮೋದಿ, ಅವರು 'ಹಿಂದೂಫಳ ನಂಬಿಕೆಯ ಶಕ್ತಿಯನ್ನು ನಾಶಪಡಿಸುವ' ಬಗ್ಗೆ ಮಾತನಾಡಿದ್ದಾರೆ. ಅದು ಡಿಎಂಕೆಯ ಮನಸ್ಥಿತಿಯೂ ಹೌದು. ಅವರು ಸನಾತನ ಧರ್ಮದ ಬಗ್ಗೆ ಕೆಟ್ಟದಾಗಿ ಮಾತನಾಡುತ್ತಾರೆ, ರಾಮ ಮಂದಿರ ಉದ್ಘಾಟನೆ (ಅಯೋಧ್ಯೆಯಲ್ಲಿ) ಬಹಿಷ್ಕರಿಸುತ್ತಾರೆ, ಜೊತೆಗೆ ಹೊಸ ಸಂಸತ್ತಿನ ಕಟ್ಟಡದಲ್ಲಿ 'ಪವಿತ್ರ ಸೆಂಗೋಲ್' ಪ್ರತಿಷ್ಠಾಪನೆಯನ್ನು ನಿರ್ಲಕ್ಷ್ಯಿಸುತ್ತಾರೆ ಎಂದು ಅವರು ಹೇಳಿದರು.

ಇಂಡಿಯಾ ಮೈತ್ರಿಕೂಟದ ನಾಯಕರು ಮಹಿಳೆಯರನ್ನು ಕೆಟ್ಟದಾಗಿ ನಡೆಸಿಕೊಳ್ಳುತ್ತಾರೆ ಮತ್ತು ಅವರು ಬದುಕಿದ್ದಾಗ ಜಯಲಲಿತಾ ಅವರನ್ನು ಡಿಎಂಕೆ ಹೇಗೆ ನಡೆಸಿಕೊಂಡಿತು ಎಂಬುದು ಎಲ್ಲರಿಗೂ ತಿಳಿದಿದೆ. ಬಿಜೆಪಿ ಮತ್ತು ಎನ್‌ಡಿಎಗೆ ನಿಮ್ಮ ಆಶೀರ್ವಾದ ಸಿಕ್ಕರೆ ಸನಾತನ ಶಕ್ತಿಯನ್ನು ರಕ್ಷಿಸುತ್ತದೆ ಮತ್ತು ಮಹಿಳೆಯರ ಗೌರವವನ್ನು ಖಚಿತಪಡಿಸುತ್ತದೆ ಎಂದು ಪ್ರಧಾನಿ ಹೇಳಿದರು.

## ಬಿಜೆಪಿ ಪರ ಪ್ರಚಾರ ಮಾಡಿದ ಶಿಕ್ಷಣ ಇಲಾಖೆ ನೌಕರ ಅಮಾನತು





ಹಾಸನ: ಸಂದೇಶದಲ್ಲಿ ಬಿಜೆಪಿ ಪರ ಪ್ರಚಾರ ಮಾಡಿದ ಆರೋಪದ ಮೇಲೆ ಹಾಸನದ ಡಿಡಿಪಿಐ ಕಛೇರಿಯ ಎಫ್.ಡಿ.ಎ ಬಿ.ಎಚ್. ಮಂಜುನಾಥ್ ಅವರನ್ನ ಸಸ್ಪೆಂಡ್ ಮಾಡಲಾಗಿದೆ.

ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಹಿನ್ನೆಲೆಯಲ್ಲಿ ಅಧಿಕಾರಿಯನ್ನು ಅಮಾನತು ಮಾಡಿದ್ದು, 24 ಗಂಟೆಗಳೊಳಗಾಗಿ ಮಾಹಿತಿ ಒದಗಿಸಿ ಎಂದು ಎ.ಡಿ.ಸಿ ಶಾಂತಲಾ ಅವರು ನೋಟಿಸ್ ಜಾರಿ ಮಾಡಿದ್ದರಂತೆ. ಬಿಜೆಪಿ ಪಕ್ಷದ ಪರ ವಾಟ್ಸಾಪ್ ಗ್ರೂಪ್ನಲ್ಲಿ ಸಂದೇಶ ಕಳಿಸಿ ಪ್ರಚಾರ ನಡೆಸಿರುವ ಬಗ್ಗೆ ನಾಗೇಂದ್ರ ಎಂಬುವರು ದೂರು ನೀಡಿದ್ದರಂತೆ.

ಪ್ರಕರಣದ ಬಗ್ಗೆ ಮಂಜುನಾಥ ಅವರ ವಿವರಣೆ ಹಾಗೂ ಡಿಸಿಪಿಐ ವರದಿ ಆದರಿಸಿ ಅಮಾನತು ಮಾಡಲಾಗಿದೆ. ಇಲಾಖಾ ತನಿಖೆ ಕಾಯ್ದಿರಿಸಿ ಡಿಸಿ ಆದೇಶ ಹೊರಡಿಸಿದ್ದಾರೆ.

## ನೀರಿಲ್ಲದೇ ಬತ್ತಿ ಹೋಗಿರುವ ಕಾಲುವೆಗಳನ್ನು ಪರಿಶೀಲಿಸಿದ ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಚಿಕ್ಕೋಡಿ ಲೋಕಸಭಾ ಚುನಾವಣೆಯ ಒತ್ತಡದ ನಡುವೇಯೂ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹಲವಾರು ಕಡೆ ಬರಗಾಲದಿಂದ ನೀರಿಲ್ಲದೆ ಪೂರ್ತಿ ಬತ್ತಿ ಹೋಗಿರುವ ಕಾಲುವೆಗಳನ್ನು ಸ್ವತಃ ಭೇಟಿ ನೀಡಿ ಪರಿಶೀಲಿಸಿದರು.

ಈ ವೇಳೆ ಮಾತನಾಡಿದ ಅವರು, ಸಂಕಷ್ಟದಲ್ಲಿರುವವರಿಗೆ ಪರಿಹಾರ ನೀಡುವಲ್ಲಿ ನಮ್ಮ ಸರ್ಕಾರ ಯಾವತ್ತೂ ಹಿಂದೆ ಉಳಿದಿಲ್ಲ. ಸಿಎಂ ಸಿದ್ದರಾಮಯ್ಯನವರ ಕಾಲದಿಂದಲೂ ಸಮಸ್ಯೆಯಾದ ಕೂಡಲೇ ಸಂತ್ರಸ್ತರಿಗೆ ಪರಿಹಾರ ನೀಡುವ ಕೆಲಸ ಆಗುತ್ತಿದೆ.

ಸದಕಾಲ ಜನರ ಜೊತೆ ನಮ್ಮ ಸರ್ಕಾರ ನಿಲ್ಲುತ್ತೆ ಎಂದು ಹೇಳಿದರು. ಈ ವೇಳೆ ಯುವ ನಾಯಕ ರಾಹುಲ್ ಜಾರಕಿಹೊಳಿ, ಕುಡಚಿ ಶಾಸಕ ಮಹೇಂದ್ರ ತಮ್ಮಣ್ಣವರ ಸೇರಿದಂತೆ ಇತರ ಅಧಿಕಾರಿಗಳು ಹಾಗೂ ಹಿರಿಯ ಮುಖಂಡರು ಇದ್ದರು.

## ನಮ್ಮ ಯೋಜನೆ, ನಾವು ಮಾಡಿದ ಅಭಿವೃದ್ಧಿಗೆ ಜನ ಜೈ ಅಂದಿದ್ದಾರೆ; ಕ್ಷೇತ್ರಾದ್ಯಂತ ಉತ್ತಮ ಜನ ಬೆಂಬಲ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್



ಮೊದಲನೇ ಪುಟದಿಂದ}

ಪ್ರಚಾರದ ವೇಳೆ ಅಲ್ಲಲ್ಲಿ ವಿವಿಧ ಸಮಾಜದ ಹಾಗೂ ವಿವಿಧ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಭೇಟಿಯಾಗಿ ಚರ್ಚಿಸುತ್ತಿದ್ದಾರೆ. ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಅವರಿಂದ ಬೆಳಗಾವಿಗೆ ಹೇಗೆಲ್ಲ ಅನ್ಯಾಯವಾಗಿದೆ ಎನ್ನುವುದನ್ನು ಜನರೇ ನಮ್ಮ ಗಮನಕ್ಕೆ ತರುತ್ತಿದ್ದಾರೆ. ಅಂತಹ ವ್ಯಕ್ತಿ ಕೈಯಲ್ಲಿ ಕ್ಷೇತ್ರವನ್ನು ಕೊಟ್ಟರೆ ನಮಗೆ ಇನ್ನಷ್ಟು ಹಾನಿಯಾಗುವುದು ಖಂಡಿತ. ಹಾಗಾಗಿ ಈಬಾರಿ ಮೃಣಾಲ ಹೆಬ್ಬಾಳಕರ್ ಅವರನ್ನು ಗೆಲ್ಲಿಸಲೇಬೇಕು. ನಾವೆಲ್ಲ ನಮ್ಮ ಏರಿಯಾಗಳಲ್ಲಿ ಜನರ ಮನವೊಲಿಸುತ್ತೇವೆ ಎಂದು ಜನರು ಹೇಳುತ್ತಿದ್ದಾರೆ. ಬೇರೆ ಬೇರೆ ಪಕ್ಷಗಳ ಮುಖಂಡರು ಸಹ ಭೇಟಿಯಾಗಿ ಬೆಂಬಲ ಸೂಚಿಸುತ್ತಿದ್ದಾರೆ. ಇದನ್ನೆಲ್ಲ ನೋಡಿದರೆ ನಮಗೆ ಖಂಡಿತ 2 ಲಕ್ಷ ಮತಗಳ ಅಂತರದ ಗೆಲುವು ಸಿಗಲಿದೆ ಎನ್ನುವ ವಿಶ್ವಾಸ ಮೂಡಿದೆ ಎಂದು ಅವರು ತಿಳಿಸಿದ್ದಾರೆ.

**ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಕಾರ್ಯಕರ್ತರ ಪಡೆ**

ಬೆಳಗಾವಿ ಲೋಕಸಭಾ ಕ್ಷೇತ್ರದ ಪ್ರತಿ ವಿಧಾನಸಭಾ ಕ್ಷೇತ್ರಗಳಲ್ಲಿ ಸ್ಥಳೀಯ ಶಾಸಕರು, ಬ್ಲಾಕ್ ಅಧ್ಯಕ್ಷರು, ಪ್ರಮುಖರ ನೇತೃತ್ವದಲ್ಲಿ ಕಾರ್ಯಕರ್ತರು ಉತ್ಸಾಹದಿಂದ ಪ್ರಚಾರ ನಡೆಸುತ್ತಿದ್ದಾರೆ. ಅಲ್ಲಲ್ಲಿ ಕಾರ್ನರ್ ಮೀಟಿಂಗ್ ಗಳನ್ನು ನಡೆಸುತ್ತಿದ್ದಾರೆ. ಮನೆ ಮನೆಗೆ ಭೇಟಿ ನೀಡಿ ಮತ ಯಾಚಿಸುತ್ತಿದ್ದಾರೆ. ನಮ್ಮ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ತಾವೇ ಸ್ವಯಂಪ್ರೇರಿತರಾಗಿ ಕಾಂಗ್ರೆಸ್ ಪರ ಪ್ರಚಾರದಲ್ಲಿ ತೊಡಗಿದ್ದಾರೆ. ಕಾರಣಾಂತರದಿಂದ ರಾಜಕಾರಣದಿಂದ ದೂರ ಉಳಿದಿದ್ದ ಹಿರಿಯರು ಕೂಡ ಈ ಬಾರಿ ಹೊರಗೆ ಬಂದು ನಮಗೆ ಬೆಂಬಲ ಸೂಚಿಸುತ್ತಿದ್ದಾರೆ. ತಾವೇ ಮುಂದಾಗಿ ಪ್ರಚಾರ ಕಾರ್ಯದಲ್ಲಿ ತೊಡಗಿದ್ದಾರೆ. ಯಾವ ಪ್ರದೇಶಕ್ಕೆ ತೆರಳಿದರೂ ಕಾಂಗ್ರೆಸ್ ಪರ ವಾತಾವಣ ಕಂಡು ಖುಷಿಯಾಗುತ್ತಿದೆ ಎಂದು ಹೆಬ್ಬಾಳಕರ್ ಹೇಳಿದ್ದಾರೆ.

ಏಪ್ರಿಲ್ 15ರಂದು ಮೃಣಾಲ ಹೆಬ್ಬಾಳಕರ್ ನಾಮಪತ್ರ ಸಲ್ಲಿಸಲಿದ್ದಾರೆ. ನಂತರದಲ್ಲಿ ಮತ್ತೊಂದು ಸುತ್ತಿನ ಪ್ರಚಾರ ಕಾರ್ಯ ನಡೆಯಲಿದೆ. ರಾಜ್ಯಮಟ್ಟದ ನಾಯಕರು ಸಹ ಪ್ರಚಾರಕ್ಕೆ ಬರಲಿದ್ದಾರೆ. ಬದಲಾವಣೆಗಾಗಿ, ಬೆಳಗಾವಿಯ ಸಮಗ್ರ ಅಭಿವೃದ್ಧಿಗಾಗಿ, ಯುವಜನರಿಗೆ ಉದ್ಯೋಗ ಸೃಷ್ಟಿಗಾಗಿ, ಕ್ಷೇತ್ರಕ್ಕೆ ಹೆಚ್ಚಿನ ಉದ್ಯಮ, ಉದ್ಯೋಗ ತರುವುದಕ್ಕಾಗಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಅವರನ್ನು ಬೆಂಬಲಿಸಬೇಕು ಎಂದು ನಾನು ಜನರಲ್ಲಿ ಕೈಮುಗಿದು ಕೇಳುತ್ತೇನೆ. ಎಲ್ಲರೂ ಸೇರಿ ಬೆಳಗಾವಿಯನ್ನು ಜನಸ್ನೇಹಿಯಾಗಿ ಅಭಿವೃದ್ಧಿಪಡಿಸೋಣ ಎಂದು ಲಕ್ಷ್ಮೀ ಹೆಬ್ಬಾಳಕರ್ ವಿನಂತಿಸಿದ್ದಾರೆ.

# ಒಕ್ಕಲಿಗರು ಮತ್ತು ಒಕ್ಕಲಿಗ ಸ್ವಾಮೀಜಿ ದಡ್ಡರಲ್ಲ: ಡಿ.ಕೆ.ಶಿವಕುಮಾರ್

ಬೆಂಗಳೂರು: 'ಒಕ್ಕಲಿಗರು ಮತ್ತು ಒಕ್ಕಲಿಗ ಸ್ವಾಮೀಜಿ ದಡ್ಡರಲ್ಲ. ತಮ್ಮ ಬಳಿ ಬರುವವ-ರಿಗೆ ಸ್ವಾಮೀಜಿ ವಿಭೂತಿ, ಹೂವಿನ ಹಾರ ಹಾಕಿ ಕಳಿಸುತ್ತಾರೆ. ಅವರು ನಮ್ಮ ಪರ, ಅವರ ಪರ ಇಬ್ಬರ ಪರವೂ ಪ್ರಚಾರ ಮಾಡುವುದಿಲ್ಲ' ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದರು.

ಒಕ್ಕಲಿಗರ ಸ್ವಾಮೀಜಿಗಳನ್ನು ಭೇಟಿ ಮಾಡಿದರೆ ಸಮುದಾಯದ ಮತಗಳು ವಿಭಜನೆ ಆಗುತ್ತವೆಯೇ? ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, 'ಸ್ವಾಮೀಜಿಗಳು ಬುದ್ಧಿವಂತರು. ರಾಜಕೀಯದಲ್ಲಿ ಅವರು ಹಸ್ತಕ್ಷೇಪ ಮಾಡುವುದಿಲ್ಲ.

ಜೆಡಿಎಸ್‌ನವರು ಮಠವನ್ನು ಇಬ್ಭಾಗ ಮಾಡಿರುವ ಬಗ್ಗೆ ಸ್ವಾಮೀಜಿಗಳಿಗೆ ಅರಿವಿದೆ. ನಮ್ಮ ಜನ ಕೂಡ ಇದನ್ನು ಗಮನಿಸುತ್ತಾರೆ.

ಮೈತ್ರಿ ಸರ್ಕಾರ ಪತನವಾದ ಬಳಿಕ ನಮ್ಮ ಸಮಾಜದ ಮುಖ್ಯಮಂತ್ರಿಯವರನ್ನು ಇಳಿಸಿ



ಬಿಟ್ಟರಲ್ಲ ಎಂದು ಸ್ವಾಮೀಜಿಗಳು ಬಿಜೆಪಿಯರನ್ನು ಪ್ರಶ್ನಿಸಬಹುದಿತ್ತಲ್ಲವೇ? ಇದನ್ನು ಕೇಳುವ ಶಕ್ತಿ ಸ್ವಾಮೀಜಿಗಳಿಗೆ ಇದೆಯೋ ಇಲ್ಲವೋ ಗೊತ್ತಿಲ್ಲ. ಒಕ್ಕಲಿಗ ಮುಖ್ಯಮಂತ್ರಿಯನ್ನು ಕೆಳಗಿಳಿಸಿದವರನ್ನೇ ಇಂದು ಸ್ವಾಮೀಜಿಯವರ ಬಳಿ ಕರೆದುಕೊಂಡು ಹೋಗಿ ಕುಮಾರಸ್ವಾಮಿ ಆಶೀರ್ವಾದ ಪಡೆಯುತ್ತಿದ್ದಾರಲ್ಲವೇ?' ಎಂದರು

ಕಾಂಗ್ರೆಸ್ ಪ್ರಣಾಳಿಕೆ ಕುರಿತು ಕುಮಾರಸ್ವಾಮಿ ಮಾಡಿರುವ ಟೀಕೆ ಬಗ್ಗೆ ಸುದ್ದಿಗಾರರ ಜೊತೆ ಮಾತನಾಡಿದ ಶಿವಕುಮಾರ್, 'ಕುಮಾರಸ್ವಾಮಿ ಅವರು ಯಾರನ್ನು ಟೀಕೆ ಮಾಡಿಲ್ಲ ಹೇಳಿ. ಪ್ರಣಾಳಿಕೆ ಬಿಡಿ, ಕುಮಾರಸ್ವಾಮಿ ಅವರು ನಮ್ಮ ಪ್ರತಿ ವಿಚಾರವನ್ನು ಟೀಕೆ ಮಾಡುತ್ತಾರೆ.

ಮೇಕೆದಾಟು ಪಾದಯಾತ್ರೆ ಟೀಕೆ ಮಾಡಿದ್ದವರು ಈಗ ಮೇಕೆದಾಟು ಯೋಜನೆ ಜಾರಿಗೆ ಶಪಥ ಮಾಡುವುದಾಗಿ ಹೇಳಿದ್ದಾರೆ. ಮಠದ ಸ್ವಾಮೀ-ಜಿಗಳನ್ನು ಬಿಟ್ಟಿಲ್ಲ. ಎರಡು ಮಠ ಮಾಡಿದ್ದಾರೆ.

ಈಗ ದಿನಬೆಳಗಾದರೆ ಮಠಕ್ಕೆ ಹೋಗಿ ಭೇಟಿ ಮಾಡುತ್ತಾರೆ. ಅವರು ತಮ್ಮ ಮಾತಿಗೆ ಎಂದಿಗೂ ಬದ್ಧರಾಗಿರುವುದಿಲ್ಲ.

ಹೀಗಾಗಿ ಅವರ ಮಾತನ್ನು ನಾವು ಗಂಭೀರವಾಗಿ ಪರಿಗಣಿಸುವುದಿಲ್ಲ. ಯಡಿಯೂರಪ್ಪನವರ ಬಗ್ಗೆ ಕುಮಾರಸ್ವಾಮಿ ಮಾತನಾಡಿದ್ದು, ಕುಮಾರಸ್ವಾಮಿ ಬಗ್ಗೆ ಯಡಿಯೂರಪ್ಪ ಮತ್ತು ಯಡಿಯೂರಪ್ಪ ಅವರ ಬಗ್ಗೆ ದೇವೇಗೌಡ ಅವರು ಮಾತನಾಡಿದ್ದನ್ನು ನಾವು ನೋಡಿದ್ದೇವೆ.

ಕುಮಾರಸ್ವಾಮಿ ಅವರನ್ನು ಮುಖ್ಯಮಂತ್ರಿ ಮಾಡಿದಾಗ ಇದೇ ಯೋಗೇಶ್ವರ್, ಅಶ್ವತ್ಥ್ ನಾರಾಯಣ, ಅಶೋಕ್ ಅವರೇ ಸರ್ಕಾರ ಕೆಡವಿದರು. ಕುಮಾರಸ್ವಾಮಿಯವರು ಈಗ ಅವರ ಜತೆಗೆ ಮೈತ್ರಿ ಮಾಡಿಕೊಂಡಿದ್ದಾರೆ. ಸರ್ಕಾರ ಕೆಡವಿದವರು ಅವರು. ಆದರೆ, ಈಗ ಕಾಂಗ್ರೆಸ್ ಸರ್ಕಾರದ ಮೇಲೆ ಆರೋಪ ಮಾಡುತ್ತಿದ್ದಾರೆ" ಎಂದು ತಿಳಿಸಿದರು.

'ವಿಧಾನಸಭೆಯಲ್ಲಿ ದೇವೇಗೌಡರು, ಕುಮಾರಸ್ವಾಮಿಯವರ ಬಗ್ಗೆ ಯಡಿಯೂರಪ್ಪ ಅವರು ಏನು ಹೇಳಿದರು ಗೊತ್ತಿದೆಯೇ? ಯಾವುದನ್ನೂ ಮುಚ್ಚಿಡಲು ಸಾಧ್ಯವಿಲ್ಲವಲ್ಲ. ಎಂತೆಂಥಾ ಪದಗಳನ್ನು ಉಪಯೋಗಿಸಿದರು. ನಾನು ಎಂದಿಗೂ ಅವರು ಬಳಸಿರುವ ಪದಗಳನ್ನು ಬಳಸಿಲ್ಲ.

# ಗೃಹಲಕ್ಷ್ಮಿ ಹಣ ಕೂಡಿಟ್ಟು ಫ್ರಿಡ್ಜ್ ಖರೀದಿಸಿದ ಮಹಿಳೆಗೆ ಡಿಕೆಶಿ ಮೆಚ್ಚುಗೆ



ಬೆಂಗಳೂರು: ರಾಜ್ಯ ಕಾಂಗ್ರೆಸ್ ಸರ್ಕಾರ ನೀಡಿದ ಗೃಹಲಕ್ಷ್ಮಿ ಯೋಜನೆಯಡಿ ಪ್ರತಿ ತಿಂಗಳು ಬರುವ 2,000 ರೂಪಾಯಿ ಹಣ ಕೂಡಿಟ್ಟು ಫ್ರಿಡ್ಜ್ ಖರೀದಿಸಿದ ಮಹಿಳೆಗೆ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ತಮ್ಮ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿರುವ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಹಾವೇರಿಯ ಮಹಿಳೆಯೊಬ್ಬರು ಗೃಹಲಕ್ಷ್ಮಿ ಗ್ಯಾರಂಟಿಯ ಹಣ ಕೂಡಿಟ್ಟು ಫ್ರಿಡ್ಜ್ ಖರೀದಿಸಿದ ಸುದ್ದಿ ತಿಳಿದು ಮನಸ್ಸಿನಲ್ಲಿ ಒಂದು ಸಾರ್ಥಕತೆಯ ಭಾವ ಮೂಡಿದೆ ಎಂದಿದ್ದಾರೆ.

ರಾಜಕೀಯ ಮಾಡಲೆಂದೇ ಎಷ್ಟೋ ಜನ ಕಾಂಗ್ರೆಸ್ ಗ್ಯಾರಂಟಿಗಳ ಬಗ್ಗೆ ಬಾಯಿಗೆ ಬಂದಂತೆ ಮಾತನಾಡಿದರು. ನಾವು ಬಡವರ ಮೇಲೆ ರಾಜಕೀಯ ಮಾಡಲ್ಲ, ಬಡವರ ಬದುಕು ಕಟ್ಟುವ ಕೆಲಸ ಮಾಡುತ್ತಿದ್ದೇವೆ. ಅವರ ಬದುಕಿನ ಗುಣಮಟ್ಟ ಹೆಚ್ಚಿಸಿದ ಸಾರ್ಥಕತೆ ಸಾಕು ನಮಗೆ ಎಂದು ತಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದ್ದಾರೆ.

ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ನೀಡಿದ್ದ ಭರವಸೆಯನ್ನು ಕಾಂಗ್ರೆಸ್ ಸರ್ಕಾರ ಅಧಿಕಾರ ಬಂದ ಆರೇ ತಿಂಗಳಲ್ಲಿ ಪೂರೈಸಿತ್ತು. ಗೃಹ ಜ್ಯೋತಿ, ಗೃಹಲಕ್ಷ್ಮೀ, ಮಹಿಳೆಯರಿಗೆ ಉಚಿತ ಬಸ್, ಅನ್ನಭಾಗ್ಯ ಯೋಜನೆ ಹಾಗೂ ಯುವ ನಿಧಿ ಯೋಜನೆಯನ್ನು ಸರ್ಕಾರ ಜನರಿಗೆ ನೀಡಿದೆ. ಐದು ಗ್ಯಾರಂಟಿಗಳಲ್ಲಿ ಒಂದಾದ ಪ್ರತಿ ಮನೆ ಒಡತಿಗೆ 2000 ರೂಪಾಯಿ ನೀಡುವ ಗೃಹಲಕ್ಷ್ಮೀ ಯೋಜನೆ ಸಹ ಒಂದಾಗಿದ್ದು, ಈ ಯೋಜನೆಯ ಹಣ ಬಹಳಷ್ಟು ಕುಟುಂಬಗಳಿಗೆ ಅನುಕೂಲವಾಗಿದೆ.

ಇದೇ ಹಣವನ್ನು ಕೂಡಿಟ್ಟುಕೊಂಡು ಹಾವೇರಿ ಜಿಲ್ಲೆಯ ಮಹಿಳೆಯೊಬ್ಬರು ಯುಗಾದಿ ಹಬ್ಬಕ್ಕೆ ಫ್ರಿಡ್ಜ್ ತೆಗೆದುಕೊಂಡಿದ್ದಾರೆ. ಹಾವೇರಿ ಜಿಲ್ಲೆಯ ಶಿಗ್ಗಾಂವಿ ಪಟ್ಟಣದ ಲತಾ ಎನ್ನುವವರು ತಮಗೆ ಪ್ರತಿ ತಿಂಗಳು ತಮಗೆ ಬಂದ ಗೃಹಲಕ್ಷ್ಮೀ ಯೋಜನೆಯ ಹಣವನ್ನು ಕೂಡಿಟ್ಟು ಯುಗಾದಿ ಹಬ್ಬಕ್ಕೆ ಹೊಸ ಫ್ರಿಡ್ಜೊಂದನ್ನು ಖರೀದಿಸಿದ್ದಾರೆ. ಈ ವಿಚಾರ ಎಲ್ಲೆಡೆ ವೈರಲ್ ಆಗಿದ್ದು, ಇದೀಗ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಕೂಡ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಪ್ರಧಾನಿ ಮೋದಿ ನೇತೃತ್ವದ ಸರ್ಕಾರ ಸಂವಿಧಾನ ಬದಲಿಸುವುದಿಲ್ಲ, ಒಂದು ವೇಳೆ ಬದಲಿಸಿದರೆ ರಾಜೀನಾಮೆ ನೀಡುತ್ತೇನೆ: ರಾಮದಾಸ್ ಅಠವಾಳೆ




ನವದೆಹಲಿ: ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ಸಂವಿಧಾನವನ್ನು ಬದಲಾಯಿಸಲು ಯೋಜಿಸುತ್ತಿದೆ ಎಂಬ ಕಾಂಗ್ರೆಸ್ ಆರೋಪವನ್ನು ಕೇಂದ್ರ ಸಾಮಾಜಿಕ ನ್ಯಾಯ ಖಾತೆ ರಾಜ್ಯ ಸಚಿವ ರಾಮದಾಸ್ ಅಠವಾಳೆ ತಳ್ಳಿಹಾಕಿದ್ದಾರೆ. ಮಹಾರಾಷ್ಟ್ರದ ಪ್ರಮುಖ ದಲಿತ ನಾಯಕ ಮತ್ತು ಭಾರತೀಯ ಜನತಾ ಪಕ್ಷದ ಮಿತ್ರ ಅಠವಾಳೆ ಅವರು, ಸಂವಿಧಾನವನ್ನು ಬದಲಾಯಿಸುವ ಯಾವುದೇ ಪ್ರಯತ್ನ ನಡೆದರೆ ರಾಜೀನಾಮೆ ನೀಡುವುದಾಗಿ ಹೇಳಿದ್ದಾರೆ.

ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ ಮುಖ್ಯಸ್ಥರಾಗಿರುವ ಕೇಂದ್ರ ಸಚಿವ ಅಠವಾಳೆ, ಭಂಡಾರಾ–ಗೊಂಡಿಯಾ ಲೋಕಸಭಾ ಕ್ಷೇತ್ರದಿಂದ ಆಡಳಿತಾರೂಢ ಮೈತ್ರಿಕೂಟದ ಅಭ್ಯರ್ಥಿ ಸುನಿಲ್ ಮೆಂಧೆ ಪರ ಪ್ರಚಾರ ಮಾಡಲು ಬಂದಿದ್ದರು.

ಈಗಿನ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರದ ವಿರುದ್ಧ ಯಾವುದೇ ಸಮಸ್ಯೆಗಳಿಲ್ಲದೆ, ಕಾಂಗ್ರೆಸ್ ಇತರ ವಿರೋಧ ಪಕ್ಷಗಳೊಂದಿಗೆ ಈ ಸರ್ಕಾರವು 400 ಕ್ಕೂ ಹೆಚ್ಚು ಸ್ಥಾನಗಳನ್ನು ಗೆದ್ದರೆ ಅದು ಸಂವಿಧಾನವನ್ನು ಬದಲಾಯಿಸುತ್ತದೆ ಎಂದು ಆರೋಪಿಸಿ ಜನರನ್ನು ದಾರಿತಪ್ಪಿಸಲು ಪ್ರಯತ್ನಿಸುತ್ತಿದೆ. ಅವರ ಆರೋಪ ಸಂಪೂರ್ಣವಾಗಿ ಆಧಾರರಹಿತವಾಗಿದೆ. ಒಂದು ವೇಳೆ ಸರ್ಕಾರ ಅಂತಹ ಪ್ರಯತ್ನ ನಡೆಸಿದರೆ ನಾನು ಸಂಪುಟಕ್ಕೆ ರಾಜೀನಾಮೆ ನೀಡುತ್ತೇನೆ. ಬಿಜೆಪಿಗೆ ನೀಡುತ್ತಿರುವ ಬೆಂಬಲವನ್ನು ಹಿಂಪಡೆಯುತ್ತೇನೆ ಎಂದು ಅವರು ಹೇಳಿದರು.

ಬಿಜೆಪಿ ಸಂಸದ ಅನಂತಕುಮಾರ್ ಹೆಗಡೆ ಇತ್ತೀಚೆಗೆ ಸಂವಿಧಾನವನ್ನು ತಿದ್ದುಪಡಿ ಮಾಡಲು ಸಂಸತ್ತಿನ ಉಭಯ ಸದನಗಳಲ್ಲಿ ಮೂರನೇ ಎರಡರಷ್ಟು ಬಹುಮತದ ಅಗತ್ಯವಿದೆ ಎಂದು ಹೇಳಿದ್ದಾರೆ. ಹೆಗಡೆಯವರ ಹೇಳಿಕೆಯಿಂದ ಉಂಟಾದ ಗದ್ದಲವನ್ನು ಶಮನಗೊಳಿಸಲು ಬಿಜೆಪಿ ಮುಂದಾಯಿತು, ಅದು ಅವರ ವೈಯಕ್ತಿಕ ಅಭಿಪ್ರಾಯ ಎಂದು ಹೇಳಿ ಸ್ಪಷ್ಟೀಕರಣ ನೀಡಿತು.

# ಛತ್ತೀಸಗಢ: ಕಾರ್ಮಿಕರನ್ನು ಹೊತ್ತೊಯ್ಯುತ್ತಿದ್ದ ಬಸ್ ಅಪಘಾತ; 15 ಮಂದಿ ಸಾವು, ಹಲವರಿಗೆ ಗಾಯ



ದುರ್ಗ: ಛತ್ತೀಸ್‌ಗಢದ ದುರ್ಗ್ ಜಿಲ್ಲೆಯಲ್ಲಿ ಮಂಗಳವಾರ ರಾತ್ರಿ ಬಸ್ಸೊಂದು 'ಮುರುಮ್' ಮಣ್ಣಿನ ಗಣಿಗಾರಿಕೆ ಗುಂಡಿಗೆ ಬಿದ್ದಿದ್ದರಿಂದ ಕನಿಷ್ಠ 15 ಜನರು ಸಾವಿಗೀಡಾಗಿದ್ದು, 12ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ. ಇವರೆಲ್ಲರೂ ಖಾಸಗಿ ಸಂಸ್ಥೆಯ ಉದ್ಯೋಗಿಗಳು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸಂತ್ರಸ್ತರು ಡಿಸ್ಟಿಲರಿಯಿಂದ ಕೆಲಸ ಮುಗಿಸಿ ಮನೆಗೆ ಮರಳುತ್ತಿದ್ದಾಗ ಕುಮ್ಹಾರಿ ಪೊಲೀಸ್ ಠಾಣಾ ವ್ಯಾಪ್ತಿಯ ಖಾಪ್ರಿ ಗ್ರಾಮದ ಬಳಿ ರಾತ್ರಿ 8.30 ರ ಸುಮಾರಿಗೆ ಈ ಘಟನೆ ನಡೆದಿದೆ ಎಂದು ದುರ್ಗ್ ಪೊಲೀಸ್ ವ-ರಿಷ್ಠಾಧಿಕಾರಿ ಜಿತೇಂದ್ರ ಶುಕ್ಲಾ ತಿಳಿಸಿದ್ದಾರೆ.

ಪ್ರಾಥಮಿಕ ಮಾಹಿತಿ ಪ್ರಕಾರ, 30 ಕ್ಕೂ ಹೆಚ್ಚು ಜನರಿದ್ದ ಬಸ್ ರಸ್ತೆಯಿಂದ ಸ್ಕಿಡ್ ಆಗಿ 40 ಅಡಿ ಆಳದ 'ಮುರುಮ್' ಗಣಿಯಲ್ಲಿ ಬಿದ್ದಿದೆ. ಅಪಘಾತದಲ್ಲಿ ಮೂವರು ಮಹಿಳೆಯರು ಸೇರಿದಂತೆ 15 ಜನರು ಸಾವಿಗೀಡಾಗಿದ್ದಾರೆ ಎಂದು ಅವರು ಹೇಳಿದರು.

ಮುರುಮ್ ಎನ್ನುವುದು ಒಂದು ರೀತಿಯ ಮಣ್ಣಾಗಿದ್ದು, ಇದನ್ನು ಹೆಚ್ಚಾಗಿ ನಿರ್ಮಾಣ ಕಾರ್ಯಗಳಿಗಾಗಿ ಬಳಸಲಾಗುತ್ತದೆ.

ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ಪೊಲೀಸರು ಸ್ಥಳಕ್ಕೆ ಬಂದಿದ್ದು, ರಾಜ್ಯ ವಿಪತ್ತು ನಿರ್ವಹಣಾ ಪಡೆ ಮತ್ತು ಸ್ಥಳೀಯರ ನೆರವಿನೊಂದಿಗೆ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿತು ಎಂದು ಶುಕ್ಲಾ ಹೇಳಿದರು.

ಘಟನೆ ಬಗ್ಗೆ ಮ್ಯಾಜಿಸ್ಟ್ರೇಟ್ ತನಿಖೆಗೆ ಆದೇಶಿಸಲಾಗಿದೆ ಎಂದು ದುರ್ಗ್ ಜಿಲ್ಲಾಧಿಕಾರಿ ರಿಚಾ ಪ್ರಕಾಶ್ ಚೌಧರಿ ಸುದ್ದಿಗಾರರಿಗೆ ತಿಳಿಸಿದರು.

'ಬಸ್ ಕುಮ್ಹಾರಿ ಪ್ರದೇಶದಲ್ಲಿ ನೆಲೆಗೊಂಡಿರುವ ಕೆಡಿಯಾ ಡಿಸ್ಟಿಲರೀಸ್‌ನ ಕಾರ್ಮಿಕರನ್ನು ಹೊತ್ತೊಯ್ಯುತ್ತಿತ್ತು.

ಇದುವರೆಗೆ 15 ಜನರ ಸಾವಿಗೀಡಾಗಿರುವುದು ದೃಢಪಟ್ಟಿದೆ. ಗಾಯಗೊಂಡ 14 ಮಂದಿಯಲ್ಲಿ 12 ಮಂದಿಯನ್ನು ರಾಯ್‌ಪುರದ ಆಲ್ ಇಂಡಿಯಾ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸಸ್‌ಗೆ ಕೊಂಡೊಯ್ಯಲಾಗಿದ್ದು, ಇನ್ನಿಬ್ಬರು ಇಲ್ಲಿನ ಆಸ್ಪತ್ರೆಯಲ್ಲಿಯೇ ಚಿಕಿತ್ಸೆ ಪಡೆಯುತ್ತಿದ್ದಾರೆ' ಎಂದು ಅವರು ಹೇಳಿದರು.

ಸಂತ್ರಸ್ತರಿಗೆ ಕಂಪನಿ ಪರಿಹಾರ ಘೋಷಿಸಿದೆ.

ಘಟನೆ ಬಗ್ಗೆ ಮ್ಯಾಜಿಸ್ಟ್ರೇಟ್ ತನಿಖೆ ನಡೆಸಲಾಗುವುದು ಮತ್ತು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಚೌಧರಿ ಹೇಳಿದರು.

ರಾಷ್ಟ್ರಪತಿ ದ್ರೌಪದಿ ಮುರ್ಮು ಘಟನೆಗೆ ಸಂತಾಪ ವ್ಯಕ್ತಪಡಿಸಿದ್ದು, 'ಛತ್ತೀಸ್‌ಗಢದ ದುರ್ಗ್ ಜಿಲ್ಲೆಯಲ್ಲಿ ಬಸ್ ಅಪಘಾತದಲ್ಲಿ ಹಲವಾರು ಜನರ ಸಾವಿನ ಸುದ್ದಿಯಿಂದ ನಾನು ತುಂಬಾ ದುಃಖಿತಳಾಗಿದ್ದೇನೆ.

ಎಲ್ಲಾ ದುಃಖಿತ ಕುಟುಂಬಗಳಿಗೆ ನನ್ನ ಆಳವಾದ ಸಂತಾಪಗಳು. ಗಾಯಗೊಂಡವರು ಶೀಘ್ರವಾಗಿ ಚೇತ-ರಿಸಿಕೊಳ್ಳಲಿ ಎಂದು ಬಯಸುತ್ತೇನೆ' ಎಂದು ಟ್ವೀಟ್ ಮಾಡಿದ್ದಾರೆ.



## ಮೋದಿ ಸಮಾವೇಶ ರದ್ದು

ಲೋಕಸಭಾ ಚುನಾವಣೆ ಹಿನ್ನೆಲೆ ಆಯೋಜನೆ ಮಾಡಲಾಗಿದ್ದ ಪ್ರಧಾನಿ ನರೇಂದ್ರ ಮೋದಿ ಅವರ ಸಮಾವೇಶ ತಾಂತ್ರಿಕ ಕಾರಣದಿಂದ ರದ್ದಾಗಿದೆ ಎಂದು ಮಾಹಿತಿ ಲಭ್ಯವಾಗಿದೆ.

ಏ. 14 ರಂದು ಮಂಗಳೂರಿನಲ್ಲಿ ನಡೆಯಬೇಕಿದ್ದ ಪ್ರಧಾನಿ ನರೇಂದ್ರ ಮೋದಿ ಸಮಾವೇಶ ತಾಂತ್ರಿಕ ಕಾರಣಗಳಿಂದ ರದ್ದಾಗಿದ್ದು, ಬೆಂಗಳೂರಿನಲ್ಲಿ ನಡೆಯಬೇಕಿದ್ದ ರೋಡ್ ಶೋ ಯತಾಪ್ರಕಾರ ನಡೆಯಲಿದೆ ಎಂದು ಬಿಜೆಪಿ ತಿಳಿಸಿದೆ.

ಕರಾವಳಿಯ ಎರಡು ಜಿಲ್ಲೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಆಗಮನ ಹಿನ್ನೆಲೆ ಅಭ್ಯರ್ಥಿಗಳಲ್ಲಿ ಹೊಸ ಹುರುಪು ತಂದಿತ್ತು, ಅಲ್ಲದೆ ಬಿಜೆಪಿ ಕೂಡ ದಾಖಲೆ ಮಟ್ಟದಲ್ಲಿ ಜನರನ್ನು ಸೇರಿಸುವುದಾಗಿ ಹೇಳಿತ್ತು, ಇಂದು ಬೆಳಗ್ಗೆ ಮೈದಾನದಲ್ಲಿ ಚಪ್ಪರ ಮುಹೂರ್ತವನ್ನೂ ನಡೆಸಲಾಗಿತ್ತು. ಜರ್ಮನ್ ಟೆಂಟ್ ಹಾಕಲು ಸಿದ್ಧತೆ ನಡೆಸಲಾಗಿತ್ತು. ಆದರೆ ಮಂಗಳೂರಿನ ಕಾರ್ಯಕ್ರಮ ಕೊನೆ ಕ್ಷಣದಲ್ಲಿ ರದ್ದಾಗಿದೆ.

## ನೀರಾವರಿ ಯೋಜನೆಗಳಿಗೆ ಆದ್ಯತೆ ನೀಡಿದ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ: ಸಚಿವ ಸತೀಶ್ ಜಾರಕಿಹೊಳಿ

ಚಿಕ್ಕೋಡಿ: ಚಿಕ್ಕೋಡಿ ಲೋಕಸಭೆ ವ್ಯಾಪ್ತಿಯಲ್ಲಿ ಹಲವು ಏತ ನೀರಾವರಿ ಯೋಜನೆಗಳು ಕಾಂಗ್ರೆಸ್ ಸರ್ಕಾರದ ಅವಧಿಯಲ್ಲೇ ಪೂರ್ಣಗೊಂಡಿದ್ದು, ಇನ್ನೂ ಅನೇಕ ಯೋಜನೆಗಳನ್ನು ರೂಪಿಸಿ ರೈತರು ಹಾಗೂ ಸಾರ್ವಜನಿಕರ ನೀರಿನ ಬವಣೆ ನೀಗಿಸಲು ಕೆಲಸ ಮಾಡಲಾಗುತ್ತಿದೆ. ಹೀಗಾಗಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೆಂದು ಲೋಕೋಪಯೋಗಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಚಿಕ್ಕೋಡಿ ತಾಲೂಕಿನ ಮಜಲಟ್ಟಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರ ಪರ ಮತಯಾಚಿಸಿ ಮಾತನಾಡಿದ ಅವರು, ಈಚೆಗೆ ಅಥಣಿ ತಾಲೂಕಿನಲ್ಲಿ 2 ಸಾವಿರ ಕೋಟಿ ರೂಪಾಯಿ ನೀರಾವರಿ ಯೋಜನೆಗೆ ಚಾಲನೆ ನೀಡಿದ್ದು, ಈ



ಯೋಜನೆಯಿಂದ ಸೂಮಾರು 50 ಸಾವಿರ ಎಕರೆ ಭೂಮಿಗೆ ನೀರಾವರಿ ಸೌಲಭ್ಯ ದೊರೆಯಲಿದೆ. ನಿಮ್ಮ ಭಾಗದ ಹನುಮಾನ್ ನೀರಾವರಿ ಯೋಜನೆಗೆ ಶೀಘ್ರವೇ ಚಾಲನೆ ನೀಡಲಾಗುವುದು ಎಂದರು.

ಕಳೆದ 30 ವರ್ಷಗಳಿಂದ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಬೆಳಗಾವಿ ಜಿಲ್ಲೆಯ ಅಭಿವೃದ್ಧಿಗೆ ಸಾಕಷ್ಟು ಕೊಡುಗೆ ನೀಡಿದ್ದೇವೆ. ಅದೇ ಕಾರಣಕ್ಕೆ ಜನರು ನಮಗೆ ಅಧಿಕಾರ ನೀಡಿದ್ದಾರೆ. ಮನೆಯಲ್ಲಿ ಕುಳಿತರೆ ಜನ ನಮಗೆ ಬೆಂಬಲ ನೀಡುತ್ತಿರಲಿಲ್ಲ. ಮುಂದೆಯೂ ನಿಮ್ಮ ಎಲ್ಲಾ ರೀತಿಯ ಸಮಸ್ಯೆಗಳಿಗೆ ಸ್ಪಂದಿಸುತ್ತೇವೆ. ಕಾರಣ ಲೋಕಸಭೆ ಚುನಾವಣೆಯಲ್ಲಿ ಪ್ರಿಯಂಕಾ ಜಾರಕಿಹೊಳಿ ಅವ-ರಿಗೆ ಹೆಚ್ಚಿನ ಮತ ನೀಡಿ ಬಹು ಅಂತರದಿಂದ ಗೆಲ್ಲಿಸಬೇಕೆಂದು ಮನವಿ ಮಾಡಿದರು.

ಇನ್ನು ಸಿಎಂ ಸಿದ್ದರಾಮಯ್ಯ ನೇತೃತ್ವದ ಐದು ಗ್ಯಾರಂಟಿ ಯೋಜನೆಗಳಿಂದ ಸರ್ವರಿಗೂ ಅನುಕೂಲವಾಗಿದೆ. ಕಾಂಗ್ರೆಸ್ ಪಕ್ಷ ಸರ್ವರ ಅಭಿವೃದ್ಧಿಯನ್ನ ಬಯಸುವ ಪಕ್ಷ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ನೀಡಿದಂತೆ ಕೇಂದ್ರದಲ್ಲಿಯೂ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಮಜಲಟ್ಟಿ ಗ್ರಾಮದ ಕಾಂಗ್ರೆಸ್ ಪಕ್ಷದ ಮುಂಚೂಣಿ ಘಟಕದ ಕಾರ್ಯಕರ್ತರು, ಹಿರಿಯರು, ಯುವಕರು ಉಪಸ್ಥಿತರಿದ್ದರು.

## ಇಬ್ಬರು ಮಕ್ಕಳನ್ನ ಕೊಂದ ತಾಯಿ ಬಂಧನ

ಬೆಂಗಳೂರು: ಮಕ್ಕಳನ್ನ ಕೊಲೆಗೈದ ಪ್ರಕರಣಕ್ಕೆ ಸಂಬಂಧಿಸಿದಂತೆ ತಾಯಿ ಗಂಗಾದೇವಿಯನ್ನ ಪೊಲೀಸರು ಬಂಧಿಸಿದ್ದಾರೆ.

ಜಾಲಹಳ್ಳಿ ಪೊಲೀಸರು ಆರೋಪಿತೆ ಗಂಗಾದೇವಿಯನ್ನ ಅರೆಸ್ಟ್ ಮಾಡಿದ್ದಾರೆ.

ಮಕ್ಕಳಾದ ಲಕ್ಷ್ಮಿ (9) ಹಾಗೂ ಗೌತಮ್ (7) ನನ್ನು ತಾಯಿ ಗಂಗಾದೇವಿ ಕೊಲೆ ಮಾಡಿದ್ದಳು.

ಕೊಲೆ ಪ್ರಕರಣದ ಆರೋಪಿತೆ ಗಂಗಾದೇವಿ ಪತಿ ಪೋಕ್ಸೊ ಕೇಸ್‌ನಲ್ಲಿ ಬಂಧಿತನಾಗಿ ಜೈಲಿನಲ್ಲಿದ್ದಾನೆ.

ಆರೋಪಿತೆ ಗಂಗಾದೇವಿ ಖಾಸಗಿ ಕಂಪನಿಯಲ್ಲಿ ಮಾರ್ಕೆಟಿಂಗ್ ಕೆಲಸ ಮಾಡುತ್ತಿದ್ದರು ಎಂದು ತಿಳಿದು ಬಂದಿದೆ.

## ಗ್ರಾಮೀಣ ಮತಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ಸಭೆ



ಬೆಳಗಾವಿ: ಲೋಕಸಭಾ ಚುನಾವಣೆ ಅಂಗವಾಗಿ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ಅವರು ಬೆಳಗಾವಿ ಗ್ರಾಮೀಣ ಮತಕ್ಷೇತ್ರದ ಉಚಗಾಂವ ಗ್ರಾಮದಲ್ಲಿ ಗ್ರಾಮದ ಹಿರಿಯರು ಹಾಗೂ ಪ್ರಮುಖರ ಸಭೆ ನಡೆಸಿ, ಮತಯಾಚನೆ ನಡೆಸಲಾಯಿತು.

ಗ್ರಾಮಗಳ ಅಭಿವೃದ್ಧಿಗೆ ಮಹತ್ವ ನೀಡುವ ಮೂಲಕ ಗ್ರಾಮೀಣ ಭಾರತಕ್ಕೆ ಹೊಸ ಮೆರಗು ತಂದ ಮಾನ್ಯ ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜೀ ಅವರ ಕೈ ಬಲಪಡಿಸಲು ಭಾರತೀಯ ಜನತಾ ಪಕ್ಷಕ್ಕೆ ನಿಮ್ಮ ಅಮೂಲ್ಯವಾದ ಮತವನ್ನು ನೀಡಿ ಆಶೀರ್ವಾದ ಮಾಡುವಂತೆ ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಬಿಜೆಪಿ ಉಪಾಧ್ಯಕ್ಷರಾದ ಶ್ರೀ ಅನಿಲ ಬೆನಕೆ, ಸಂಚಾಲಕರಾದ ಶ್ರೀ ಸಂಜಯ ಪಾಟೀಲ್, ಮಾಜಿ ವಿಧಾನಪರಿಷತ್ ಸದಸ್ಯರಾದ ಶ್ರೀ ಮಹಾಂತೇಶ ಕವಟಗಿಮಠ, ಮಾಜಿ ಶಾಸಕರಾದ ಶ್ರೀ ಮನೋಹರ ಕಡೋಲಕರ್, ಮಂಡಲ ಅಧ್ಯಕ್ಷರಾದ ಶ್ರೀ ಧನಂಜಯ ಜಾಧವ, ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀ ರಮೇಶ ಕಣ್ಣೂಕರ, ಪ್ರಮುಖರಾದ ಶ್ರೀ ಬಂಡು ಪಾಟೀಲ ಹಾಗೂ ಇತರರು ಉಪಸ್ಥಿತ-ರಿದ್ದರು.

## ವಸಂತ ತಂದಿದೆ ಬಣ್ಣದ ಓಕಳಿ

ಗಿಡ ಮರ ಬಳ್ಳಿಯ
ಹಸಿರಿನ ಚಿಗುರಿನ ಜೋಕಾಲಿ

ನಸುಕಲಿ ಎದ್ದು ಹೆಂಗೆಳೆಯರೊಂದಿಗೆ
ತುಂಬಿದೆ ಓಣಿಗಳ ಮನೆಯ ಮುಂದಿನ
ನಲಿವಿನ ರಂಗೋಲಿ

ನವಿಲುಗಳೊಂದಿಗೆ ಚಿಟ್ಟೆಗಳೊಟ್ಟಿಗೆ
ಬಣ್ಣ ಬಣ್ಣದ ಪಕ್ಷಿಗಳು
ಮರಗಳ ನೆರಳಲ್ಲಿ ನೀರಿನ ಅರವಟ್ಟಿಗಳು
ನೀಡಿವೆ ಮಾನವತೆಯ ಸಾಕ್ಷಿಗಳು

ಮಾವಿನ ತೋರಣ ಹುಣಸೆಯ ಚಿಗುರಿನ
ರಸವಿಳಿದ ಕಂಠದ ಕೊರಳಿನ
ಕುಹೂ ಕುಹೂ ಇಂಪ್ ದನಿ
ಕನ್ನಡರಸ ದನಿ ಕನ್ನಡ ಕಂಪ್ ದನಿ
ನೂರ್ಮಡಿಯಾಗಲಿ ಮಾರ್ದನಿಯಾಗಲಿ
ಎಲ್ಲರೊಳಗೆ ಒಲುಮೆಯ ಒಳ್
ದನಿಯಾಗಿ ತುಂಬಿರಲಿ

# ಅವಹೇಳನಕಾರಿ ಹೇಳಿಕೆ: ಸುರ್ಜೇವಾಲಾಗೆ ಚುನಾವಣಾ ಆಯೋಗದಿಂದ ನೋಟಿಸ್

ನವದೆಹಲಿ: ಭಾರತೀಯ ಜನತಾ ಪಕ್ಷದ ಸಂಸದೆ ಹೇಮಾ ಮಾಲಿನಿ ವಿರುದ್ಧ 'ಅವಹೇಳನಕಾರಿ, ಅನಾಗರಿಕ ಮತ್ತು ಅಸಭ್ಯ' ಹೇಳಿಕೆ ನೀಡಿದ್ದಕ್ಕಾಗಿ ಕಾಂಗ್ರೆಸ್ ನಾಯಕ ರಣದೀಪ್ ಸಿಂಗ್ ಸುರ್ಜೇವಾಲಾ ಅವರಿಗೆ ಚುನಾವಣಾ ಆಯೋಗ ಮಂಗಳವಾರ ಶೋಕಾಸ್ ನೋಟಿಸ್ ಜಾರಿ ಮಾಡಿದೆ.

ಚುನಾವಣಾ ಆಯೋಗ ಇನ್ನು ಒಂದು ಹೆಜ್ಜೆ ಮುಂದೆ ಹೋಗಿ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು, ತಮ್ಮ ನಾಯಕರು ಸಾರ್ವಜನಿಕ ಭಾಷಣದ ಸಮಯದಲ್ಲಿ ಮಹಿಳೆಯರ ಗೌರವ ಮತ್ತು ಘನತೆಯನ್ನು ಎತ್ತಿಹಿಡಿಯುವ ಕುರಿತ ತನ್ನ ಸಲಹೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದನ್ನು ಖಚಿತಪಡಿಸಿಕೊಳ್ಳಲು ತೆಗೆದುಕೊಂಡ ಕ್ರಮಗಳ ಬಗ್ಗೆ ಪ್ರತಿಕ್ರಿಯೆ ಸಲ್ಲಿಸುವಂತೆ ಸೂಚಿಸಿದೆ.

ಸುರ್ಜೇವಾಲಾ ಹಾಗೂ ಖರ್ಗೆ ಇಬ್ಬರೂ ತಮ್ಮ ಪ್ರತಿಕ್ರಿಯೆಯನ್ನು ಚುನಾವಣಾ ಆಯೋಗಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ.



ಏಪ್ರಿಲ್ 11ರ ಸಂಜೆಯೊಳಗೆ ಪ್ರತಿಕ್ರಿಯೆ ನೀಡುವಂತೆ ಸುರ್ಜೇವಾಲಾ ಅವರಿಗೆ ಸೂಚಿಸಿದ್ದರೆ, ಖರ್ಗೆ ಅವರಿಗೆ ಮರುದಿನ ಸಂಜೆಯವರೆಗೂ ಕಾಲಾವಕಾಶ ನೀಡಲಾಗಿದೆ.

ಬಿಜೆಪಿ ಐಟಿ ವಿಭಾಗದ ಮುಖ್ಯಸ್ಥ ಅಮಿತ್ ಮಾಳವಿಯಾ ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ವೀಡಿಯೊದಲ್ಲಿ, ಆಡಳಿತಾರೂಢ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಸುರ್ಜೇವಾಲಾ ಅವರು, ನಟಿ–ರಾಜಕಾರಣಿಯ ಬಗ್ಗೆ ಕೆಲವು ಆಕ್ಷೇಪಾರ್ಹ ಹೇಳಿಕೆಗಳನ್ನು ನೀಡಿದ್ದರು.

ಹರಿಯಾಣದ ಚುನಾವಣಾ ಪ್ರಚಾರದ ವೇಳೆ ಹೇಮಾ ಮಾಲಿನಿ ವಿರುದ್ಧ 'ಅಶ್ಲೀಲ ಮತ್ತು ಅವಹೇಳನಕಾರಿ ಹೇಳಿಕೆ' ನೀಡಿದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಿರುದ್ಧ ಬಿಜೆಪಿ ಚುನಾವಣಾ ಆಯೋಗಕ್ಕೆ ದೂರು ನೀಡಿತ್ತು.

ಆದಾಗ್ಯೂ, ದಿನಾಂಕವಿಲ್ಲದ ವಿಡಿಯೋವನ್ನು ಎಡಿಟ್ ಮಾಡಲಾಗಿದೆ ಮತ್ತು ತಿರುಚಲಾಗಿದೆ. ಬಿಜೆಪಿ ಸಂಸದೆಯನ್ನು ಅವಮಾನಿಸುವ ಅಥ–'ವಾ ನೋಯಿಸುವ ಉದ್ದೇಶ ತಮಗೆ ಇಲ್ಲ ಎಂದು ಸುರ್ಜೇವಾಲಾ ಅವರು ಹೇಳಿದ್ದಾರೆ.

ಹೇಮಾ ಮಾಲಿನಿ ಅವರ ಸೌಂದರ್ಯದ ಕಾರಣಕ್ಕಾಗಿಯೇ ಅವರನ್ನು ಸಂಸದೆಯನ್ನಾಗಿ ಆಯ್ಕೆ ಮಾಡಲಾಗಿದೆ. ಲೋಕಸಭೆಯಲ್ಲಿ ಸಂಸದರು ಆಕೆಯನ್ನೇ ನೋಡುತ್ತಿರುತ್ತಾರೆ ಎಂದು ಸುರ್ಜೇವಾಲಾ ಹೇಳಿದ್ದರು.

# ಚುನಾವಣಾ ಜಾಹೀರಾತು-ಪೂರ್ವಾನುಮತಿ ಕಡ್ಡಾಯ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಬೆಳಗಾವಿ ಲೋಕಸಭಾ ಚುನಾವಣೆ-2024ಕ್ಕೆ ಸಂಬಂಧಿಸಿದಂತೆ ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ವಿದ್ಯುನ್ಮಾನ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಜಾಹೀರಾತು ಹಾಗೂ ಬಲ್ಕ್ ಎಸ್-ಎಂಎಸ್‌ಗಳನ್ನು ಪ್ರಚುರಪಡಿಸುವ ಮುಂಚೆ ಜಿಲ್ಲಾಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ(ಎಂಸಿಎಂಸಿ)ಯ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕಾರ್ಯನಿರ್ವಹಿಸುವ ಎಂಸಿಎಂಸಿ ಸಮಿತಿಯು ವಿದ್ಯುನ್ಮಾನ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಟಗೊಳ್ಳುವ ಚುನಾವಣಾ ವಿಷಯ ಹಾಗೂ ಅವುಗಳ ವಿಷಯವಸ್ತು(ಕಂಟೆಂಟ್) ಪರಿಶೀಲಿಸಿ ಅನುಮತಿ ನೀಡಲಿದೆ.

ಸ್ಥಳೀಯ ಕೇಬಲ್ ನೆಟವರ್ಕ, ಟಿವಿ ಚಾನೆಲ್‌ಗಳು, ಖಾಸಗಿ ಎಫ್-ಎಂ ರೇಡಿಯೋ ಕೇಂದ್ರಗಳು, ಸಿನಿಮಾಮಂದಿರಗಳು, ಸಾಮಾಜಿಕ ಜಾಲತಾಣಗಳು ಹಾಗೂ ಮೊಬೈಲ್ ಸರ್ವೀಸ್ ಪ್ರೊವೈಡರ್‌ಗಳು ಯಾವುದೇ ರೀತಿಯ ಚುನಾವಣಾ ಜಾಹೀರಾತು ಅಥವಾ ಬಲ್ಕ್ ಎಸ್-ಎಂಎಸ್ ಪ್ರಸಾರ ಮಾಡುವ ಮುಂಚೆ ಎಂಸಿಎಂಸಿ ನೀಡಿರುವ ಪೂರ್ವಾನುಮತಿ ಪ್ರಮಾಣಪತ್ರವನ್ನು ಜಾಹೀರಾತು ನೀಡುವ ರಾಜಕೀಯ ಪಕ್ಷ ಅಥವಾ ಅಭ್ಯರ್ಥಿಗಳ ಕಡೆಯಿಂದ ಪಡೆದುಕೊಳ್ಳಬೇಕು.

ಭಾರತ ಚುನಾವಣಾ ಆಯೋಗದ ನಿರ್ದೇಶನಗಳು ಮತ್ತು ಚಾಲ್ತಿಯಲ್ಲಿರುವ ವಿವಿಧ ನಿಯಮಾವಳಿಗಳನ್ನು ಪಾಲಿಸುವ ಮೂಲಕ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗೆ ಎಲ್ಲ ಮಾಧ್ಯಮದವರು ಹಾಗೂ ರಾಜಕೀಯ ಪಕ್ಷದ ಪ್ರತಿನಿಧಿಗಳು ಸಹಕರಿಸಬೇಕು.

**ಮಾಧ್ಯಮಗಳ ಮೇಲೆ ನಿಗಾ:**

ಮಾದರಿ ನೀತಿ ಸಂಹಿತೆ ಜಾರಿಗೆ ಬಂದ ತಕ್ಷಣದಿಂದಲೇ ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಪ್ರಕಟವಾಗುವ ಚುನಾವಣಾ ಜಾಹೀರಾತು ಮತ್ತು ಸಂದೇಹಾಸ್ಪದ ಪೇಡ್‌ನ್ಯೂಸ್‌ಗಳ ಮೇಲೆ ನಿಗಾ ವಹಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ



ನಿತೇಶ್ ಪಾಟೀಲ ತಿಳಿಸಿದ್ದಾರೆ.

ಸಮಿತಿಯು ಮುದ್ರಣ, ವಿದ್ಯುನ್ಮಾನ ಮಾಧ್ಯಮಗಳಾದ ಕೇಬಲ್ ಚಾನೆಲ್/ಟಿವಿ ಚಾನೆಲ್‌ಗಳು, ರೇಡಿಯೋ ಹಾಗೂ ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ಇಡಲಿದ್ದು, ಅನುಮತಿ ಪಡೆಯದೇ ಚುನಾವಣಾ ಜಾಹೀರಾತು ನೀಡಿರುವುದು ಕಂಡುಬಂದಲ್ಲಿ ಸಂಬಂಧಪಟ್ಟವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳಲಿದೆ.

ಯಾವುದೇ ಪಕ್ಷ ಅಥವಾ ಅಭ್ಯರ್ಥಿಗಳ ಪರವಾಗಿ ಜಾಹೀರಾತುಗಳನ್ನು ಪ್ರಕಟಿಸಿದ ಸಂದರ್ಭದಲ್ಲಿ ಆಯಾ ಮಾಧ್ಯಮಗಳಿಗೆ ನಿಗದಿಪಡಿಸಲಾದ ಜಾಹೀರಾತು ದರ ಅಥವಾ ಆಯಾ ಮಾಧ್ಯಮಗಳ ವಾಸ್ತವಿಕ ವಾಣಿಜ್ಯ ಜಾಹೀರಾತು ದರ ಪರಿಗಣಿಸಿ ಅದರ ಮೊತ್ತವನ್ನು ಪಕ್ಷ ಅಥವಾ ಅಭ್ಯರ್ಥಿಯ ಚುನಾವಣಾ ವೆಚ್ಚಕ್ಕೆ ಸೇರಿಸಲು ಚುನಾವಣಾ ವೆಚ್ಚ ವೀಕ್ಷಕರಿಗೆ ಸಮಿತಿಯು ಮಾಹಿತಿ ನೀಡಲಿದೆ.

ಅದೇ ರೀತಿಯಲ್ಲಿ ಯಾವುದೇ ಮಾಧ್ಯಮದಲ್ಲಿ ಪ್ರಸಾರವಾದ ಚುನಾವಣಾ ಜಾಹೀರಾತುಗಳಿಗೆ ಪೂರ್ವಾನುಮತಿ ಪಡೆಯಲಾಗಿದೆಯೇ ಎಂಬುದನ್ನು ಪರಿಶೀಲಿಸಲಾಗವುದು. ಅಭ್ಯರ್ಥಿಯ ಅಥವಾ ಪಕ್ಷದ ಒಪ್ಪಿಗೆಯಿಂದ ನೀಡಲಾಗಿರುವ ಜಾಹೀರಾತುಗಳ ವೆಚ್ಚವನ್ನು ಸಂಬಂಧಪಟ್ಟ ಪಕ್ಷ ಅಥವಾ ಅಭ್ಯರ್ಥಿಯ ವೆಚ್ಚಕ್ಕೆ ಸೇರಿಸಲಾಗುತ್ತದೆ.

**ಮೀಡಿಯಾ ಮಾನಿಟರಿಂಗ್ ಸೆಲ್:**

ಚುನಾವಣಾ ಜಾಹೀರಾತುಗಳ ಪರಿಶೀಲನೆ ಮತ್ತು ಪೂರ್ವಾನುಮತಿ(ಪ್ರಿಸರ್ಟಿಫಿಕೇಷನ್)ಗಾಗಿ "ವಾರ್ತಾಭವನ" ಉಪ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನ್ಯಾಯಾಲಯ ಆವರಣ"(ದೂರವಾಣಿ ಸಂಖ್ಯೆ-9480841233) ಈ ಕಚೇರಿಯಲ್ಲಿ ಮೀಡಿಯಾ ಮಾನಿಟರಿಂಗ್ ಕೇಂದ್ರ ಸ್ಥಾಪಿಸಲಾಗಿರುತ್ತದೆ. ಜಾಹೀರಾತುಗಳನ್ನು ಪ್ರಕಟ ಅಥವಾ ಪ್ರಸಾರ ಮಾಡಲು ಪೂರ್ವಾನುಮತಿ ಪಡೆಯಲು ಈ ಕೇಂದ್ರದಲ್ಲಿ ಅರ್ಜಿ ನಮೂನೆಗಳು ಲಭ್ಯವಾಗಿರುತ್ತವೆ. ಅಭ್ಯರ್ಥಿಗಳು ಅಥವಾ ರಾಜಕೀಯ ಪಕ್ಷಗಳು ಭರ್ತಿ ಮಾಡಿದ ಅರ್ಜಿ ಜತೆಗೆ ಜಾಹೀರಾತಿನ ಎರಡು ಸಿಡಿ ಹಾಗೂ ಹಸ್ತಪ್ರತಿ(ಸ್ಕ್ರಿಪ್ಟ್) ಸಲ್ಲಿಸಬೇಕು.

ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಮತ್ತು ಕಣ್ಗಾವಲು(ಎಂಸಿಎಂಸಿ) ಸಮಿತಿಯು ಅರ್ಜಿಗಳನ್ನು ಪರಿಶೀಲಿಸಿ, ಪೂರ್ವಾನುಮತಿ ನೀಡಲಿದೆ. ಆದ್ದರಿಂದ ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ಜಾಹೀರಾತುಗಳನ್ನು ಪ್ರಕಟ ಅಥವಾ ಪ್ರಸಾರ ಮಾಡಲು ಕಡ್ಡಾಯವಾಗಿ ಪೂರ್ವಾನುಮತಿ ಪಡೆಯಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಿ.13 ಮತ್ತು ದಿ.14 ರಂದು 'ಪರಿಮಳದವರು' ನಾಟಕ ಮರುಪ್ರದರ್ಶನ

ಬೆಳಗಾವಿ: ನಗರದ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ ದಿ. 10 ಬುಧವಾರದಂದು ರಂಗಸಂಪದ ತಂಡದವರು ಪತ್ರಿಕಾಗೋಷ್ಠಿಯನ್ನು ಕರೆದಿದ್ದರು. ಈ ಗೋಷ್ಠಿಯಲ್ಲಿ, ಶ್ರೀ ರಾಘವೇಂದ್ರ ಸ್ವಾಮೀಜಿಯವರ ಜೀವನ ಚರಿತ್ರೆಯಾಧಾರಿತ ನಾಟಕ 'ಪರಿಮಳದವರು' ಕುರಿತಂತೆ ಸಂಘದ ಅಧ್ಯಕ್ಷ ಡಾ. ಅರವಿಂದ ಕುಲಕರ್ಣಿಯವರು ಕೆಲ ವಿಷಯಗಳನ್ನು ಹಂಚಿಕೊಂಡರು.

ಮಾ. ದಿ. 29 ರಂದು ಲೋಕಮಾನ್ಯ ರಂಗಮಂದಿರದಲ್ಲಿ ಸುಮಾರು ಏಳನೂರು ಪ್ರೇಕ್ಷಕರ ಮಧ್ಯದಲ್ಲಿ ಈ ನಾಟಕ ಪ್ರದರ್ಶನಗೊಂಡಿತ್ತು. ಸಭಾಗೃಹ ತುಂಬಿ ಜನ ನಿಂತುಕೊಂಡು ಈ ನಾಟಕವನ್ನು ವೀಕ್ಷಿಸಿದ್ದರು. ನಾಟಕವನ್ನು



ಮೆಚ್ಚಿಕೊಂಡ ಭಕ್ತರು, ಕಲಾಸಕ್ತರು ಮರುಪ್ರದರ್ಶನ ಗೊಳ್ಳಬೇಕೆಂದು ಆಗ್ರಹಿಸಿದರು.

ಇದೇ ಸಂದರ್ಭದಲ್ಲಿ ಬೆಳಗಾವಿ ಅಖಿಲ ಬ್ರಾಹ್ಮಣ ಸಮಾಜದ ಅಧ್ಯಕ್ಷರಾದ ಎಸ್. ಎಂ. ಕುಲಕರ್ಣಿಯವರು ಎರಡು ಪ್ರದರ್ಶನದ ಭರವಸೆಯನ್ನಿಟ್ಟರು.

ಅದರಂತೆ ಇದೇ ದಿನಾಂಕ 13 ಶನಿವಾರ ಮತ್ತು ದಿನಾಂಕ 14 ರವಿವಾರ ಸಾಯಂಕಾಲ 6-30 ಕ್ಕೆ ಕೋನವಾಳ ಬೀದಿಯಲ್ಲಿರುವ ಲೋಕಮಾನ್ಯ ರಂಗಮಂದಿರದಲ್ಲಿ 'ಪರಿಮಳದವರು' ನಾಟಕ ಪ್ರದರ್ಶನಗೊಳ್ಳಲಿದೆ. ಈ ಎರಡು ದಿನಗಳ ಈ ನಾಟಕದ ಪ್ರವೇಶವು ಸಂಪೂರ್ಣ ಉಚಿತವಾಗಿದ್ದು ಆಸಕ್ತರು ಇದರ ಸದುಪಯೋಗ ತೆಗೆದುಕೊಳ್ಳಬೇಕು ಎಂದು ಡಾ. ಅರವಿಂದ ಕುಲಕರ್ಣಿ ಹೇಳಿದರು.

ನಾಟಕದ ಪ್ರಮುಖ ಪಾತ್ರವಾದ ಶ್ರೀ ರಾಘವೇಂದ್ರ ಸ್ವಾಮಿಗಳ ಪಾತ್ರದಲ್ಲಿ ನಾನು (ಡಾ.ಅರವಿಂದ ಕುಲಕರ್ಣಿ) ಅಭಿನಯಿಸಲಿದ್ದೇನೆ.

ಉಳಿದ ಪಾತ್ರಗಳಲ್ಲಿ ಪದ್ಮಾ ಕುಲಕರ್ಣಿ, ಪವಿತ್ರಾ ರೇವಣಕರ, ಸ್ನೇಹಾ ಜೋಶಿ, ಸೀಮಾ ಕುಲಕರ್ಣಿ, ನಿರ್ಮಲಾ ಬಟ್ಟಲ, ಭಾಗ್ಯಶ್ರೀ ಕುಲಕರ್ಣಿ, ಶೀಲಾ ರಾಜಪುರೋಹಿತ, ಸತ್ಯ ವಿಜಯ, ವರದ ದೇಶಪಾಂಡೆ, ಪ್ರಸಾದ ಕಾರಜೋಳ, ಯೋಗೇಶ ದೇಶಪಾಂಡೆ, ವಿನೋದ ಸಪ್ಪಣ್ಣವರ, ಆರ್. ವಿ. ಭಟ್, ವ್ಯಾಸಾಚಾರ್ಯ ಅಂಬೇಕರ, ಪ್ರಶಾಂತ ಪಾಂಡವ, ರಮೇಶ ಬಡಿಗೇರ, ಕು. ಸ್ನೇಹಾ ಕುಲಕರ್ಣಿ, ಕು. ಪೂರ್ವಿ ರಾಜಪುರೋಹಿತ ಕಾಣಿಸಿಕೊಳ್ಳಲಿದ್ದಾರೆ.

ಜಿ. ಬಿ. ಜೋಶಿ ರಚನೆಯಾಗಿದ್ದು ನಿರ್ದೇಶನ ಶ್ರೀಪತಿ ಮಂಜನಬೈಲು ಅವರದ್ದಾಗಿದೆ. ಪ್ರಸಾದನ ಸಂತೋಷ ಮಹಾಲೆ, ನೆಳಲು ಬೆಳಕು ಗುರುದತ್ತ ಪೇಡ್ನೇಕರ, ತಾಂತ್ರಿಕ ನೆರವು ಮಾಧುರಿ ಇನಾಮದಾರ, ರಂಗ ಸಜ್ಜಿಕೆ ಓಂಕಾರ ತಮೂಚೆ ಅವರದ್ದಾಗಿದೆ ಎಂದು ಡಾ. ಅರವಿಂದ ಕುಲಕರ್ಣಿ ಹೇಳಿದರು.

ವೇದಿಕೆ ಮೇಲೆ ರಂಗಸಂಪದದ ಅಧ್ಯಕ್ಷರಾದ ಡಾ.ಅರವಿಂದ ಕುಲಕರ್ಣಿ, ಉಪಾಧ್ಯಕ್ಷ ರಾಮಚಂದ್ರ ಕಟ್ಟಿ, ಕಾರ್ಯದರ್ಶಿ ಪ್ರಸಾದ ಕಾರಜೋಳ, ಆಡಳಿತ ಮಂಡಳಿ ಸದಸ್ಯ ಚಿದಾನಂದ ವಾಳಕೆ ಉಪಸ್ಥಿತರಿದ್ದರು.

# ಪತ್ನಿಯನ್ನು ಮಚ್ಚಿನಿಂದ ಕೊಚ್ಚಿ ಪೊಲೀಸರಿಗೆ ಶರಣಾದ ಪತಿ




ಗದಗ: ಹಾಡಹಗಲೇ ಮಚ್ಚಿನಿಂದ ಕೊಚ್ಚಿ ಪತಿಯಿಂದ ಪತ್ನಿಯ ಕೊಲೆಗೆ ಯತ್ನಿಸಿರೋ ಘಟನೆ ಮುಂಡರಗಿ ಪಟ್ಟಣದ ಅಂಚೆ ಕಚೇರಿ ಬಳಿ ನಡೆದಿದೆ.

ಬೇಲೂರಪ್ಪ ಪೂಜಾರ ಎಂಬಾತ ತನ್ನ ಹೆಂಡತಿ ಗೀತಾ ಬೇಲೂರಪ್ಪ ಪೂಜಾರ (35) ಅವರಿಗೆ ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿದ್ದಾನೆ. ಕೌಟುಂಬಿಕ ಕಲಹ ಹಿನ್ನೆಲೆಯಲ್ಲಿ ಬೇಲೂರಪ್ಪ ಪೂಜಾರ ಹೆಂಡತಿ ಮೇಲೆ ಹಲ್ಲೆ ಮಾಡಿರೋ ಶಂಕೆ ವ್ಯಕ್ತವಾಗಿದೆ. ಮಾರಣಾಂತಿಕವಾಗಿ ಹಲ್ಲೆ ಮಾಡಿರೋ ಹಿನ್ನೆಲೆಯಲ್ಲಿ ಮಹಿಳೆ ಸ್ಥಿತಿ ಗಂಭೀರವಾಗಿದೆ. ಮುಂಡರಗಿ ತಾಲೂಕು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಹಲ್ಲೆಗೆ ಒಳಗಾದ ಗೀತಾ ಬೇಲೂರಪ್ಪ ಪೂಜಾರ ಅವರು ಅಂಚೆ ಕಚೇರಿಯಲ್ಲಿ ಉದ್ಯೋಗಿಯಾಗಿದ್ದರು. ಹಲ್ಲೆ ಮಾಡಿದ ಆರೋಪಿ ಪತಿ ಬೇಲೂರಪ್ಪ ಮಾರಕಾಸ್ತ್ರ ಹಿಡಿದು ಸ್ಥಳದಲ್ಲೇ ನಿಂತಿದ್ದ. ಗಂಡನ ರೌದ್ರಾವತಾರ ನೋಡಿ ಸ್ಥಳೀಯರು ಬೆಚ್ಚಿ ಬಿದ್ದಿದ್ದು, ಪೊಲೀಸರು ವಶಕ್ಕೆ ಪಡೆದಿದ್ದಾರೆ. ಗಾಯಗೊಂಡ ಮಹಿಳೆಯನ್ನು ಆಸ್ಪತ್ರೆಗೆ ಸಾಗಿಸಲಾಗಿದೆ. ಸ್ಥಳಕ್ಕೆ ಮುಂಡರಗಿ ಪೊಲೀಸರ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಬೆಳಗಾವಿ: ತಂದೆಯ ದುಡಿಮೆ ಹಣ ಕೇಳಿದ್ದಕ್ಕೆ ಬಾಲಕಿ ಮೇಲೆ ಮಾಲೀಕನಿಂದ ಹಲ್ಲೆ



ಬೆಳಗಾವಿ: ತಂದೆ ದುಡಿದ ಹಣವನ್ನು ಕೇಳಿದ್ದಕ್ಕೆ ಮಗಳ ಮೇಲೆ ಮಾಲೀಕನೊಬ್ಬ ಥಳಿಸಿರುವ ಘಟನೆ ಬೆಳಗಾವಿ ತಾಲೂಕಿನ ಕಾಕತಿ ಗ್ರಾಮದಲ್ಲಿ ನಡೆದಿದೆ.

ಅರ್ಜುನ್ ಎಂಬುವವರು ಜೈ ಹನುಮಾನ್ ಬ್ಯಾಂಡ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು. ಯುಗಾದಿ ಹಬ್ಬದ ಹಿನ್ನೆಲೆಯಲ್ಲಿ ಅರ್ಜುನ್ ಪುತ್ರಿ 17 ವರ್ಷದ ಬಾಲಕಿ ತಂದೆಯ ದುಡಿಮೆಯ ಹಣವನ್ನು ಕೇಳಿದ್ದಾರೆ. ಹಣ ಕೇಳಿದ್ದಕ್ಕೆ ಕಂಪನಿ ಮಾಲೀಕರಾದ ಅಶೋಕ್ ಭಜಂತ್ರಿ ,ಕರೆಪ್ಪ ಭಜಂತ್ರಿ ಅವಾಚ್ಯವಾಗಿ ನಿಂದಿಸಿ ತಂದೆ- ಮಗಳ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ. ಹಲ್ಲೆಯಿಂದ ಗಂಭೀರವಾಗಿ ಗಾಯಗೊಂಡಿರುವ ಬಾಲಕಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಬಾಲಕಿಗೆ ಐಸಿಯುನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಬಾಲಕಿ ಪೋಷಕರು ಕಮಿಷ್ನರ್ ಗೆ ದೂರು ನೀಡಿದ್ದಾರೆ.

# ತಾಲೂಕು ಮಟ್ಟದಲ್ಲಿಯೂ ಪಕ್ಷ ಸಂಘಟಿಸಿ: ರಾಹುಲ್ ಜಾರಕಿಹೊಳಿ



ರಾಯಬಾಗ: ಪ್ರತಿಯೊಬ್ಬ ಕಾರ್ಯಕರ್ತನೂ ಪಕ್ಷದ ಆಸ್ತಿ. ಹೀಗಾಗಿ ತಾಲೂಕು ಮಟ್ಟದಲ್ಲಿ ಪಕ್ಷವನ್ನು ಸಂಘಟಿಸಲು ಕಾರ್ಯಕರ್ತರು ಮುಂದಾಗಬೇಕು ಎಂದು ಸತೀಶ್ ಶುಗರ್ಸ್ ನಿರ್ದೇಶಕ, ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಹೇಳಿದರು.

ಚಿಕ್ಕೋಡಿ ಲೋಕಸಭಾ ಚುನಾವಣೆ ಪ್ರಯುಕ್ತ ರಾಯಬಾಗ ವಿಧಾನಸಭಾ ಕ್ಷೇತ್ರದ ದೇವನಟ್ಟಿ.ರಾಯಬಾಗ ರೈಲ್ವೆ ಸ್ಟೇಶನ್, ನಾಗರಾಳ ಗ್ರಾಮದಲ್ಲಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರ ಪರ ಮತಯಾಚಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸಮರ್ಥವಾಗಿ ಐದು ವರ್ಷ ಜನಪರ, ಜಾತ್ಯತೀತ ನೆಲೆಗಟ್ಟಿನಲ್ಲಿ ಆಡಳಿತ ನಡೆಸಲಿದೆ. ಜನರ ಆಶೀರ್ವಾದದಿಂದ ನಮ್ಮ ಪಕ್ಷ ಅಧಿಕಾರಕ್ಕೆ ಬಂದಿದೆ. ರಾಜ್ಯ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದು, ಗ್ಯಾರಂಟಿ ಯೋಜನೆಗಳ ಬಗ್ಗೆ ಜನರಿಗೆ ತಲುಪಿಸುವ ಜವಾಬ್ದಾರಿ ನಮ್ಮ, ನಿಮ್ಮೆಲ್ಲರ ಮೇಲಿದೆ ಎಂದು ಹೇಳಿದರು.

ರಾಜ್ಯದ ಜನರು ಹಿಂದಿನ ರಾಜ್ಯ ಮತ್ತು ಕೇಂದ್ರ ಬಿಜೆಪಿ ಸರ್ಕಾರದ ದುರಾಡಳಿತಕ್ಕೆ ಬೇಸತ್ತು ಕಾಂಗ್ರೆಸ್ ಪಕ್ಷದ ಮೇಲೆ ವಿಶ್ವಾಸವಿಟ್ಟು ವಿಧಾನಸಭೆ ಚುನಾವಣೆಯಲ್ಲಿ ಗೆಲ್ಲಿಸಿದ್ದಾರೆ.



ಬೆಳಗಾವಿ: ಗ್ರಾಮೀಣ ಕ್ಷೇತ್ರದ ಬಡಾಲ ಅಂಕಲಗಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ ಶ್ರೀ ಕೃಷ್ಣ ಮಂದಿರದ ವಾಸ್ತುಶಾಂತಿ ಹಾಗೂ ರಾಧಾ-ಕೃಷ್ಣರ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಯುವ ಕಾಂಗ್ರೆಸ್ ಮುಖಂಡ, ಬೆಳಗಾವಿ ಗ್ರಾಮೀಣ ಕ್ಷೇತ್ರದ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಭಾಗವಹಿಸಿದ್ದರು. ಈ ಸಮಯದಲ್ಲಿ ಗ್ರಾಮದ ಹಿರಿಯರು, ವಿವಿಧ ಮಠಗಳ ಮಠಾಧೀಶರು, ದೇವಸ್ಥಾನ ಟ್ರಸ್ಟ್ ಕಮೀಟಿಯ ಸದಸ್ಯರು ಇದ್ದರು.

# ಬರ ಪರಿಹಾರ ನೀಡದ ಪಕ್ಷದ ಅಭ್ಯರ್ಥಿಗಳಿಗೆ ಹಳ್ಳಿಗಳ ಪ್ರವೇಶ ನಿರ್ಬಂಧ: ಕುರುಬೂರು ಶಾಂತಕುಮಾರ್

ಬೆಳಗಾವಿ: ತೀವ್ರ ಬರಗಾಲದಿಂದ ತತ್ತರಿಸಿರುವ ರೈತರ ಸಂಕಷ್ಟ ಆಲಿಸಲು ಯಾರೂ ಇಲ್ಲವಾಗಿದ್ದಾರೆ. ಅಧಿಕಾರ ಹಿಡಿಯಲು ಪೈಪೋಟಿ ನಡೆಸುತ್ತಿದ್ದಾರೆ. ರಾಜಕಾರಣವನ್ನು ವ್ಯಾಪಾರಕ್ಕಿಂತಲೂ ಹೆಚ್ಚು ಲಾಭ ಗಳಿಸುವ ಕ್ಷೇತ್ರವನ್ನಾಗಿ ಮಾಡಿಕೊಂಡಿದ್ದಾರೆ. ಇದರಿಂದಾಗಿ ಜನರು ತೊಂದರೆ ಅನುಭವಿಸುವಂತಾಗಿದೆ. ಬರ ಪರಿಹಾರ ನೀಡದ ಪಕ್ಷದ ಅಭ್ಯರ್ಥಿಗಳಿಗೆ ಹಳ್ಳಿಗಳ ಪ್ರವೇಶ ನಿರ್ಬಂಧ ಹಾಕಬೇಕು ಎಂದು ಅಧ್ಯಕ್ಷ ಕುರುಬೂರು ಶಾಂತಕುಮಾರ್ ಒತ್ತಾಯಿಸಿದರು.

ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದಿಂದ ಇಲ್ಲಿನ ಸಾಹಿತ್ಯ ಭವನದಲ್ಲಿ ಬುಧವಾರ ಆಯೋಜಿಸಿದ್ದ 'ಬರಗಾಲದಲ್ಲಿ ರೈತರ- ದಿಕ್ಸೂಚಿ' ಚಿಂತನ-ಮಂತನ' ಸಭೆಯಲ್ಲಿ ಮಾತನಾಡಿದ ಅವರು, ಕೇಂದ್ರ ಹಾಗೂ



ರಾಜ್ಯ ಸರ್ಕಾರಗಳು ರೈತರ ಬರದ ಸಂಕಷ್ಟ ಕಾಲದಲ್ಲಿ ಜಗಳವಾಡುತ್ತಾ ಮನರಂಜನೆ ನಿಡುತ್ತಿದ್ದಾರೆ. ಇದು ರೈತರ ಹೊಟ್ಟೆ ತುಂಬುವುದಿಲ್ಲ ಈ ನಾಟಕ ಬಿಡಿ .ಪರಿಹಾರ ನೀಡಿ. ಇಲ್ಲವೇ ಮತ ಕೇಳಲು ಬರಬೇಡಿ ಎಂದು ರೈತರು ಅಭ್ಯರ್ಥಿಗಳನ್ನ ಊರಿಂದ ಹೊರಗಿಡಿ ಎಂದು ಕರೆ ನೀಡಿದರು.

ತೀವ್ರ ಬರಗಾಲದಿಂದ ತತ್ತರಿಸಿರುವ ರೈತರ ಸಂಕಷ್ಟ ಆಲಿಸಲು ಯಾರೂ ಇಲ್ಲವಾಗಿದ್ದಾರೆ. ಅಧಿಕಾರ ಹಿಡಿಯಲು ಪೈಪೋಟಿ ನಡೆಸುತ್ತಿದ್ದಾರೆ. ರಾಜಕಾರಣವನ್ನು ವ್ಯಾಪಾರಕ್ಕಿಂತಲೂ ಹೆಚ್ಚು ಲಾಭ ಗಳಿಸುವ ಕ್ಷೇತ್ರವನ್ನಾಗಿ ಮಾಡಿಕೊಂಡಿದ್ದಾರೆ. ಇದರಿಂದಾಗಿ ಜನರು ತೊಂದರೆ ಅನುಭವಿಸುವಂತಾಗಿದೆ. ರೈತ ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು.

ಪ್ರಾಕೃತಿಕ ವಿಕೋಪದಿಂದ ಕೃಷಿ ಕ್ಷೇತ್ರ ದುರ್ಬಲವಾಗುತ್ತಿದೆ. ನೀರಿನ ಕೊರತೆಯಿಂದ ಬೆಳೆಗಳು ಒಣಗುತ್ತಿವೆ. ಕೊಳವೆಬಾವಿಗಳಲ್ಲಿ ದೊರೆಯುವ ನೀರಿನ ಪ್ರಮಾಣ ಕಡಿಮೆಯಾಗಿದೆ. ರೈತರು ಈಗಲಾದರೂ ಹಳ್ಳಿಗಳಲ್ಲಿ ಕಟ್ಟುವ ಚಿಂತನೆ ಕಡಿಮೆ ಮಾಡಿ ಕಟ್ಟೆಗಳ ಹೂಳೆತ್ತಿ ಪುನಶ್ಚೇತನ ನೀಡಬೇಕು. ಹೊಸದಾಗಿ ಕೆರೆಗಳನ್ನು ನಿರ್ಮಿಸುವ ಕೆಲಸ ಮಾಡಬೇಕು. ಇಲ್ಲದಿದಲ್ಲಿ ಭವಿಷ್ಯದಲ್ಲಿ ಬಹಳ ಸಂಕಷ್ಟ ಎದುರಿಸಬೇಕಾಗುತ್ತದೆ' 'ರಾಜಕಾರಣಿಗಳಿಗೆ ಜನರ ಸಂಕಷ್ಟ ಬೇಕಾಗಿಲ್ಲ. ಅಧಿಕಾರಿಗಳು ಚುನಾವಣಾ ಗುಂಗಿನಲ್ಲಿ ತಲ್ಲೀನವಾಗಿದ್ದಾರೆ ಎಂದು ದೂರಿದರು.

ರಗಾಲದಿಂದ ತತ್ತರಿಸಿರುವ ರೈತರ ಸಂಕಷ್ಟ ಆಲಿಸಲು ಯಾರು ಇಲ್ಲವಾಗಿದ್ದಾರೆ ಅಧಿಕಾರ ಹಿಡಿಯಲು ಪೈಪೋಟಿ ನಡೆಸುತ್ತಿದ್ದಾರೆ ರಾಜಕೀಯ ಕ್ಷೇತ್ರ ವ್ಯಾಪಾರಕ್ಕಿಂತಲೂ ಹೆಚ್ಚು ಲಾಭಗಳಿಸುವ ಕ್ಷೇತ್ರವಾಗಿದೆ. ರಾಜ್ಯದಲ್ಲಿ ಕುಡಿಯುವ ನೀರು ದನಕರುಗಳಿಗೆ ಮೇವು ಸಿಗದಂತಾಗಿದೆ ಅಧಿಕಾರಿಗಳು ಚುನಾವಣೆ ಕಾರಣ ಹೇಳಿ ರೈತರನ್ನ ನಿರ್ಲಕ್ಷ್ಯ ಮಾಡಿದ್ದಾರೆ? ರಾಜಕೀಯ ಪಕ್ಷಗಳು ಬರ ನಿವಾರಣೆಗೆ, ಕೃಷಿ ಕ್ಷೇತ್ರದ ರಕ್ಷಣೆಗೆ, ನದಿ ಸಂರಕ್ಷಣೆಗೆ, ಅರಣ್ಯ ಸಂರಕ್ಷಣೆಗೆ ಒತ್ತು ನೀಡಬೇಕು' ಎಂದು ಒತ್ತಾಯಿಸಿದರು.

ಚೂನಪ್ಪ ಪೂಜಾರಿ ಮಾತನಾಡಿ ಸರ್ಕಾರ ರೈತರ ಮೇಲೆ ದಬ್ಬಾಳಿಕೆ ನಡೆಸುತ್ತಿದೆ. ಚಳವಳಿಯನ್ನು ಹತ್ತಿಕ್ಕುತ್ತಿದೆ. ಎಂ.ಎಸ್. ಸ್ವಾಮಿನಾಥನ್ ವರದಿ ಶಿಫಾರಸು ಜಾರಿಗೆ ಕ್ರಮ ಕೈಗೊಂಡಿಲ್ಲ. ರೈತರ ಆದಾಯ ದ್ವಿಗುಣಗೊಳಿಸುವ ಭರವಸೆ ಈಡೇರಿಲ್ಲ ಕೃಷಿ ಉತ್ಪನ್ನಗಳಿಗೆ ಉತ್ಪಾದನಾ ವೆಚ್ಚವನ್ನೆ ಕಡಿಮೆ ತೋರಿಸಿ ಸರ್ಕಾರ ರೈತರನ್ನು ವಂಚಿಸುತ್ತಿದೆ ಎಂದು ಹೇಳಿದ್ದರು. ರೈತ ರವಿಕುಮಾರ್ ಬನ್ನೂರ, ಮಹೇಶ ಬೆಳಗಾಂವಕರ, ಭುವನೇಶ್ವರ ಸಿದ್ದಾಪೂರ, ಕಲ್ಲಪ್ಪ ಬಿರಾದಾರ, ಹತ್ತಳಿ ದೇವರಾಜ, ಪರಿಶುರಾಮ ಎತ್ತಿನಗುಡ್ಡ ಸೇರಿ ಇತರರ ರೈತ ಮುಖಂಡರು ಇದ್ದರು.

# ಪಿಯುಸಿಯಲ್ಲಿ ಆರ್‌ಎಲ್‌ಎಸ್ ವಿದ್ಯಾರ್ಥಿನಿ ಸೃಷ್ಟಿ ಉತ್ತಮ ಸಾಧನೆ



ಬೆಳಗಾವಿ: ಇಲ್ಲಿನ ಆರ್‌ಎಲ್‌ಎಸ್ ಪಿಯು ಕಾಲೇಜ್‌ನ ವಿದ್ಯಾರ್ಥಿನಿ ಸೃಷ್ಟಿ ಸತೀಶ ಚಿಟಗಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.94ರಷ್ಟು ಅಂಕ ಗಳಿಸುವ ಮೂಲಕ ಉತ್ತಮ ಸಾಧನೆ ಮಾಡಿದ್ದಾಳೆ.

ಬೆಳಗಾವಿಯ ನಿವಾಸಿಯಾದ ಸೃಷ್ಟಿ ಸತೀಶ ಚಿಟಗಿ ಪ್ರತಿಷ್ಠಿತ ಆರ್‌ಎಲ್‌ಎಸ್ ಪಿಯು ಕಾಲೇಜ್‌ನ ವಿದ್ಯಾರ್ಥಿನಿಯಾಗಿದ್ದು, ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಕುಮಾರಿ ಸೃಷ್ಟಿ ಚಿಟಗಿ 600 ಕ್ಕೆ 569 (ಶೇ 94.83%) ಅಂಕಗಳಸಿ ಉತ್ತೀರ್ಣರಾಗಿದ್ದಾರೆ. ಬೆಳಗಾವಿಯ ಸತೀಶ ಚಿಟಗಿ ಮತ್ತು ದೀಪಿಕಾ ಸತೀಶ ಚಿಟಗಿ ದಂಪತಿಯ ಪುತ್ರಿಯಾದ ಇವಳ ಸಾಧನೆಗೆ ಕಾಲೇಜ ಪ್ರಾಂಶುಪಾಲರು, ಉಪನ್ಯಾಸಕರು ಮತ್ತು ಕುಟುಂಬಸ್ಥರು ಹರ್ಷ ವ್ಯಕ್ತಪಡಿಸಿದ್ದಾರೆ. ಮಗಳ ಸಾಧನೆಗೆ ಪೋಷಕರು ಅಪಾರ ಮೆಚ್ಚುಗೆ ವ್ಯಕ್ತಪಡಿಸಿ, ಅಭಿನಂದನೆ ಸಲ್ಲಿಸಿದ್ದಾರೆ.

# ಕೇಂದ್ರ ಬಿಜೆಪಿ ಸರ್ಕಾರದ ವೈಫಲ್ಯಗಳನ್ನು ಜನತೆಗೆ ತಿಳಿಸಿ: ಸಚಿವ ಸತೀಶ್ ಜಾರಕಿಹೊಳಿ

ಹುಕ್ಕೇರಿ: ದೇಶದಲ್ಲಿ ಹತ್ತು ವರ್ಷಗಳಿಂದ ಆಡಳಿತ ನಡೆಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಬಿಜೆಪಿ ಸರ್ಕಾರದ ವೈಫಲ್ಯಗಳನ್ನು ಕಾರ್ಯಕರ್ತರು ಜನರಿಗೆ ತಿಳಿಸಬೇಕೆಂದು ಲೋಕೋಪಯೋಗಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಹುಕ್ಕೇರಿ ತಾಲೂಕಿನ ಸಂಕೇಶ್ವರ ಪಟ್ಟಣದ ನೇಸರಿ ಗಾರ್ಡನ್ ದಲ್ಲಿ ಹಮ್ಮಿಕೊಂಡಿದ್ದ ಹುಕ್ಕೇರಿ ವಿಧಾನಸಭೆ ಮತಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಧಾನಿ ಮೋದಿಯವರು ಅಧಿಕಾರಕ್ಕೇರಲು ಜನತೆಗೆ ಸಾಕಷ್ಟು ಭರವಸೆಗಳನ್ನು ನೀಡಿದರು. ಆದರೆ ಇದುವರೆಗೆ ಒಂದೇ ಒಂದು ಭರವಸೆ ಈಡೇರಿಸಲಿಲ್ಲ ಎಂದು ವಾಗ್ದಾಳಿ ನಡೆಸಿದರು.

ರೈತರ ಆದಾಯ ದ್ವಿಗುಣ ಆಗಲಿಲ್ಲ. ಎರಡು ಕೋಟಿ ಯುವಕರಿಗೆ ಉದ್ಯೋಗ ದೊರೆಯಲ್ಲಿ. ಕಪ್ಪು ಹಣ ವಾಪಸ್ಸ್ ಬರಲಿಲ್ಲ. ಇಂತಹ ಅನೇಕ ಭರವಸೆಗಳನ್ನು ನೀಡಿದ ಕೇಂದ್ರ ಬಿಜೆಪಿ ಸರ್ಕಾರದ ಎಲ್ಲಾ ವೈಫಲ್ಯಗಳನ್ನು ಕಾರ್ಯಕರ್ತರು ಜನತೆಗೆ ತಿಳಿಸಬೇಕೆಂದ ಅವರು, ರಾಜ್ಯದಲ್ಲಿ ಮೋದಿ ಹವಾ ಇದೆ ಎನ್ನುತ್ತಿದ್ದಾರೆ. ಕರ್ನಾಟಕದಲ್ಲಿ ಏನಿದ್ದರೂ ಸಿದ್ದರಾಮಯ್ಯನವರ ಹವಾ, ಕಾಂಗ್ರೆಸ್ ಪಕ್ಷದ ಹವಾ ಇದೆ. ಮೋದಿ ಹವಾ ಎಲ್ಲಿಯೂ ನಮಗೆ ಕಾಣುತ್ತಿಲ್ಲ ಎಂದು ವ್ಯಂಗ್ಯವಾಡಿದರು.

ಇನ್ನು ಹಾಲಿ ಸಂಸದ ಅಣ್ಣಾಸಾಬೇಬ್ ಜೊಲ್ಲೆ ಅವರ ವೈಪಲ್ಯಗಳನ್ನು ಜನತೆಗೆ ತಿಳಿಸಿ. ಚಿಕ್ಕೋಡಿ ಲೋಕಸಭೆ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಗೆಲ್ಲುವ ವಾತಾವರಣ ಇದೆ. ಜೊಲ್ಲೆ ವಿರುದ್ಧ ಇಲ್ಲಿನ ಜನರಿಗೆ ಅಸಮಾಧನವಿದೆ. ಅದಕ್ಕಾಗಿ ಕಾರ್ಯಕರ್ತರು ಪಕ್ಷದ ಅಭ್ಯರ್ಥಿ ಗೆಲುವಿಗೆ ಹೆಚ್ಚಿನ ಮುತುರ್ವಜಿ ವಹಿಸಬೇಕೆಂದು ಸಲಹೆ ನೀಡಿದರು.

ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಕಳೆದ ನಾಲ್ಕೈದು ವರ್ಷಗಳಿಂದ ಸಾಮಾಜಿಕ, ಶೈಕ್ಷಣಿಕವಾಗಿ ಸೇವೆ ಸಲ್ಲಿಸುತ್ತಿದ್ದು, ಚಿಕ್ಕೋಡಿ ಲೋಕಸಭೆ ಮತದಾರರು, ಮುಖಂಡರು ಪ್ರಿಯಂಕಾ ಅವರನ್ನು ಆಶೀರ್ವದಿಸಿ, ಲೋಕಸಭೆಗೆ




ಕಳುಹಿಸುವ ಮೂಲಕ ಪ್ರಿಯಂಕಾ ಅವರಿಗೆ ರಾಜಕೀಯವಾಗಿ ಸೇವೆ ಸಲ್ಲಿಸಲು ಅನುವು ಮಾಡಿಕೊಡಬೇಕೆಂದು ಕೋರಿದರು.

ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಮಾತನಾಡಿ, ನಿಮ್ಮೆಲ್ಲರ ಪ್ರೀತಿ, ಆರ್ಶೀವಾದದಿಂದ ನನಗೆ ಚಿಕ್ಕೋಡಿ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಟಿಕೆಟ್ ಸಿಕ್ಕಿದೆ. ನಾನು ಎಂಬಿಎ ಪದವಿ ಪಡೆದಿದ್ದು, ಕೆಳದ ನಾಲ್ಕೈದು ವರ್ಷಗಳಿಂದ ಸಾರ್ವಜನಿಕವಾಗಿ ಅನೇಕ ಕೆಲಸಗಳಲ್ಲಿ ತೊಡಗಿದ್ದೇನೆ.

ಸತೀಶ್ ಜಾರಕಿಹೊಳಿ ಫೌಂಡೇಶನ್ ಮೂಲಕ ಯುವಕರಿಗೆ ಆರ್ಮಿ, ಪೊಲೀಸ್, ಕೆಎಎಸ್, ಐಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿಗಳನ್ನು ಉಚಿತವಾಗಿ ನೀಡುತ್ತಿದ್ದೇವೆ.

ಕೆಳದ ಬಾರಿ ಬೆಳಗಾವಿ ಜಿಲ್ಲೆಯ 58 ಸಾವಿರ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ "ನಮ್ಮ ಪಯಣ ಗೆಲುವಿನತ್ತ" ಪುಸ್ತಕಗಳನ್ನು ವಿತರಿಸಿದ್ದೇವೆಂದು ತಿಳಿಸಿದರು.

ಇನ್ನು ತಂದೆ, ಸಚಿವರಾದ ಸತೀಶ್ ಜಾರಕಿಹೊಳಿ ಅವರ ಕಾರ್ಯಕ್ಷಮತೆ ಬಗ್ಗೆ ನಿಮಗೆಲ್ಲ ಗೊತ್ತು.

ಬೆಳಗಾವಿ ಜಿಲ್ಲೆಯ ಅಭಿವೃದ್ಧಿಗೆ ತಂದೆಯವರು ಶ್ರಮಿಸುತ್ತಿದ್ದಾರೆ. ಲೋಕೋಪಯೋಗಿ ಇಲಾಖೆ ಸಚಿವರಾದ ಬಳಿಕ ಜಿಲ್ಲೆಗೆ ಸಾಕಷ್ಟು ಯೋಜನೆಗಳನ್ನು ತಂದಿದ್ದು, ರಾಜ್ಯದಲ್ಲಿ ಅನೇಕ ಹೆದ್ದಾರಿಗಳನ್ನು ನಿರ್ಮಿಸುತ್ತಿದ್ದಾರೆ.

ಕೆಲ ಹೆದ್ದಾರಿಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದ ಅವರು, ಕಾರಣ ಚಿಕ್ಕೋಡಿ ಕ್ಷೇತ್ರದಿಂದ ಹೆಚ್ಚಿನ ಮತಗಳನ್ನು ನೀಡಿ ನನ್ನನ್ನು ಲೋಕಸಭೆಗೆ ಕಳುಹಿಸಿದರೆ ತಂದೆಯವರ ಸಲಹೆ, ಸೂಚನೆ ಮೇರೆಗೆ ಚಿಕ್ಕೋಡಿ ಲೋಕಸಭೆ ಕ್ಷೇತ್ರದಲ್ಲಿ ಅಭಿವೃದ್ಧಿಯ ಹೊಳೆ ಹರಿಸುವ ಮೂಲಕ ನಿಮ್ಮ ಸಮಸ್ಯೆಗಳಿಗೆ ಸದಾ ಸ್ಪಂದಿಸುತ್ತೇನೆಂದು ಭರವಸೆ ನೀಡಿದರು.

ದೇಶದಲ್ಲಿ ಕಾಂಗ್ರೆಸ್ ಪಕ್ಷದ ಆಡಳಿತದಲ್ಲಿ ಜವಾಲಾಲ್ ನೆಹರು ಅವರಿಂದ ಹಿಡಿದು ಡಾ. ಮನ್ ಮೋಹನ್ ಸಿಂಗ್ ಅವರ ಆಡಳಿತಾದವಧಿಯಲ್ಲಿ ಸಾಕಷ್ಟು ಡ್ಯಾಮ್‌ಗಳನ್ನು ನಿರ್ಮಿಸುವ ಮೂಲಕ ನೀರಾವರಿ ಯೋಜನೆಗಳನ್ನು ಮಾಡಲಾಗದೆ.

ಇಂದಿರಾ ಗಾಂಧಿ ಅವರು ಪ್ರಧಾನಿಯಾಗಿದ್ದಾಗ ಮಹಿಳೆಯರ ಸಬಲೀಕರಣಕ್ಕೆ ಆದ್ಯತೆ ನೀಡಿದ್ದಾರೆ. ಡಾ. ಮನ್ ಮೋಹನ್ ಸಿಂಗ್ ಅವಧಿಯಲ್ಲಿ ದೇಶದ ಆರ್ಥಿಕತೆ ಪ್ರಗತಿಯತ್ತ ಸಾಗಿತ್ತು. ಹೀಗೆ ಅನೇಕ ಜನಪರ ಯೋಜನೆಗಳನ್ನು ನೀಡುವ ಮೂಲಕ ಕಾಂಗ್ರೆಸ್ ಪಕ್ಷ ದೇಶದ ಏಳಿಗೆಗೆ ಅಪಾರ ಕೊಡುಗೆ ನೀಡಿದೆ ಎಂದು ಹೇಳಿದರು.

ಮಾಜಿ ಸಚಿವ ಎ.ಬಿ. ಪಾಟೀಲ್ ಮಾತನಾಡಿ, ಚಿಕ್ಕೋಡಿ ಲೋಕಸಭೆ ಕ್ಷೇತ್ರದಿಂದ ಪ್ರಿಯಂಕಾ ಜಾರಕಿಹೊಳಿ ಆಯ್ಕೆಯಾಗುವುದು ನಿಶ್ಚಿತ. ಆದರೆ ಬಹು ಅಂತರದಿಂದ ಗೆಲ್ಲಿಸಬೇಕೆಂದು ನಾವೆಲ್ಲರೂ ಪಣ ತೊಡೋಣ ಎಂದರು.

ಪ್ರಧಾನಿ ನರೇಂದ್ರ ಮೋದಿಯವರ ಆಡಳಿತದಿಂದ ದೇಶದ ಜನ ಬೇಸತ್ತಿದ್ದಾರೆ. ಪೆಟ್ರೋಲ್, ಡೀಸೆಲ್ ಬೆಲೆ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದ್ದು, ಜನ ಸಾಮಾನ್ಯರು ಕಷ್ಟಕ್ಕೆ ಸಿಲುಕಿದ್ದಾರೆ. ಮೋದಿಯವರು ಯುವಕರಿಗೆ ಉದ್ಯೋಗ ನೀಡುವ ಭರವಸೆ ಹುಸಿಯಾಗಿದೆ. ಅದಕ್ಕಾಗಿ ಸರ್ವರ ಕಾಳಜಿ ಹೊಂದಿರುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕೆಂದು ಮನವಿ ಮಾಡಿದರು.

## ಲೋಕಸಭಾ ಚುನಾವಣೆ: ಅಧಿಕಾರಿಗಳ ಸಭೆ

# ಚೆಕ್‌ಪೋಸ್ಟ್‌ಗಳಲ್ಲಿ ತೀವ್ರ ತಪಾಸಣೆಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ

ಬೆಳಗಾವಿ: ಜಿಲ್ಲೆಯಲ್ಲಿ ಮತ್ತು ಅಂತರ್ ರಾಜ್ಯ ಗಡಿಯಲ್ಲಿರುವ ಚೆಕ್ ಪೋಸ್ಟ್ ಗಳಲ್ಲಿ ಇನ್ನೂ ಹೆಚ್ಚಿನ ನಿಗಾವಹಿಸುವ ಮೂಲಕ ಅಕ್ರಮ ಹಣ, ಮದ್ಯ ಅಥವಾ ಇತರೆ ವಸ್ತುಗಳ ಸಾಗಾಣಿಕೆಗೆ ಕಡಿವಾಣ ಹಾಕಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಸೂಚನೆ ನೀಡಿದರು.

ಲೋಕಸಭಾ ಚುನಾವಣಾ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ(ಏ.9) ನಡೆದ ಸಹಾಯಕ ಚುನಾವಣಾಧಿಕಾರಿಗಳು ಹಾಗೂ ನೋಡಲ್ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಳಗಾವಿ ಜಿಲ್ಲೆಯು ಗೋವಾ ಹಾಗೂ ಮಹಾರಾಷ್ಟ್ರ ಗಡಿಗಳನ್ನು ಹೊಂದಿರುವುದರಿಂದ ಅಕ್ರಮ ನಗದು ಹಾಗೂ ವಸ್ತುಗಳ ಸಾಗಾಣಿಕೆ ಹೆಚ್ಚಿರುವ ಸಾಧ್ಯತೆಗಳಿರುತ್ತವೆ. ಚುನಾವಣಾ ಆಯೋಗ ಕೂಡ ಈ ಬಗ್ಗೆ ನಿರಂತರವಾಗಿ ಎಚ್ಚರಿಕೆ ನೀಡಿರುತ್ತದೆ.

ಆದ್ದರಿಂದ ಚೆಕ್ ಪೋಸ್ಟ್ ಗಳಲ್ಲಿ ನಿಯೋಜಿಸಿರುವ ತಂಡಗಳು ಈ ನಿಟ್ಟಿನಲ್ಲಿ ಸದಾ ಜಾಗ್ರತರಾಗಿರಬೇಕು ಎಂದು ತಿಳಿಸಿದರು.

ಚುನಾವಣಾ ಕಾರ್ಯಕ್ಕೆ ನಿಯೋಜಿಸಲಾಗಿರುವ ಎಫ್.ಎಸ್.ಟಿ., ವಿ.ಎಸ್.ಟಿ. ತಂಡಗಳು ಆಯಾ ಮತಕ್ಷೇತ್ರಗಳಲ್ಲಿ ನಿರಂತರವಾಗಿ ಸಂಚರಿಸುವುದು ಕಡ್ಡಾಯವಾಗಿರುತ್ತದೆ. ಈ ಬಗ್ಗೆ ಸಹಾಯಕ ಚುನಾವಣಾಧಿಕಾರಿಗಳು ನಿಗಾ ವಹಿಸಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಪೊಲೀಸ್, ಅಬಕಾರಿ, ವಾಣಿಜ್ಯ ತೆರಿಗೆ ಸೇರಿದಂತೆ ವಿವಿಧ ಇಲಾಖೆಗಳ ತಂಡಗಳು ಜಂಟಿಯಾಗಿ ಗೋದಾನುಗಳು ಸೇರಿದಂತೆ ಇತರೆ ಸಂಶಯಾಸ್ಪದ ಸ್ಥಳಗಳಲ್ಲಿ ಅನಿರೀಕ್ಷಿತವಾಗಿ ಪರಿಶೀಲನೆ ಕೈಗೊಳ್ಳಬೇಕು.



ಯಾವುದೇ ಕಾರಣಕ್ಕೂ ಅಕ್ರಮ ಮದ್ಯ, ನಗದು ಅಥವಾ ವಸ್ತುಗಳ ಸಾಗಾಣಿಕೆ ಅಥವಾ ವಿತರಣೆ ಆಗದಂತೆ ಕಟ್ಟುನಿಟ್ಟಿನ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಸಹಾಯಕ ಚುನಾವಣಾಧಿಕಾರಿಗಳು ಮತ್ತು ನೋಡಲ್ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ನಿರ್ದೇಶನ ನೀಡಿದರು.

ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಂಡಿರುವ ಎಲ್ಲ ಅಧಿಕಾರಿಗಳು ಸಿಬ್ಬಂದಿ, ಪೊಲೀಸ್, ಚಾಲಕರು ಸೇರಿದಂತೆ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತ ಚಲಾಯಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ತಿಳಿಸಿದರು.

ಚೆಕ್‌ಪೋಸ್ಟ್ ಗಳಲ್ಲಿ ತಪಾಸಣೆ ನಡೆಸುವಾಗ ಕಡ್ಡಾಯವಾಗಿ ವಿಡಿಯೋ ಚಿತ್ರೀಕರಣ ನಡೆಸಬೇಕು ಎಂದು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಅವರು ಸೂಚನೆ ನೀಡಿದರು.

ವಾಹನಗಳ ಒಳಗಡೆ ಕೂಡ ಸೂಕ್ಷ್ಮವಾಗಿ ತಪಾಸಣೆ ಮಾಡಬೇಕು. ವಾಹನಗಳಲ್ಲಿ ಏನಾದರೂ ಮಾಡಿಫಿಕೇಷನ್ ಕಂಡುಬಂದರೆ ಅದನ್ನು ಕೂಡ ಪರಿಶೀಲಿಸಬೇಕು ಎಂದು ತಿಳಿಸಿದರು.

ಅಗತ್ಯ ಸೇವೆಗಳಲ್ಲಿ ನಿರತರಾಗಿರುವ ಎಲ್ಲ ಅಧಿಕಾರಿಗಳು/ಸಿಬ್ಬಂದಿ ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಕಡ್ಡಾಯವಾಗಿ ಅಂಚೆಮತದಾನ ಮಾಡುವಂತೆ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

**ವಾಹನಗಳ ಸಮರ್ಪಕ ತಪಾಸಣೆಗೆ ನಿರ್ದೇಶನ:**

ಜಿಲ್ಲೆಯ ಪ್ರತಿಯೊಂದು ಚೆಕ್ ಪೋಸ್ಟ್ ಗಳಲ್ಲಿ ವಾಹನಗಳನ್ನು ಕಾಟಾಚಾರಕ್ಕೆ ಪರಿಶೀಲಿಸದೇ ಸಮರ್ಪಕವಾಗಿ ಪರಿಶೀಲನೆ ನಡೆಸಬೇಕು.

ಪ್ರಯಾಣಿಕರ ವಾಹನಗಳ ಜತೆಗೆ ಸರಕು ಸಾಗಾಣಿಕೆ ವಾಹನಗಳನ್ನು ಕೂಡ ಕಡ್ಡಾಯವಾಗಿ ಹಾಗೂ ಕೂಲಂಕುಶವಾಗಿ ತಪಾಸಣೆ ನಡೆಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ ತಿಳಿಸಿದರು.

ಬೆಳಗಾವಿ ನಗರ ಪೊಲೀಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಐಎಎಸ್ ಪ್ರೋಬೇಷನರಿ ಅಧಿಕಾರಿ ಶುಭಂ ಶುಕ್ಲಾ ಉಪಸ್ಥಿತರಿದ್ದರು.

ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಮಹಾನಗರ ಪಾಲಿಕೆ ಆಯುಕ್ತರಾದ ಪಿ.ಎನ್.ಲೋಕೇಶ್ ಸೇರಿದಂತೆ ಎಲ್ಲ ಸಹಾಯಕ ಚುನಾವಣಾಧಿಕಾರಿಗಳು, ಉಪ ವಿಭಾಗಾಧಿಕಾರಿಗಳು ಮತ್ತು ನೋಡಲ್ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಏ.10 ರಿಂದ 12 ರವರೆಗೆ ಮದ್ಯ ಮಾರಾಟ ನಿಷೇಧ

ಬೆಳಗಾವಿ: ರಂಜಾನ ಹಬ್ಬದ ಹನ್ನೆಲೆಯಲ್ಲಿ ಬೆಳಗಾವಿ ತಾಲೂಕಿನಾದ್ಯಂತ ಕಾನೂನು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಮುಂಜಾಗ್ರತಿ ಕ್ರಮವಾಗಿ ಏ.10 ಸಯಂಕಾಲ 6 ರಿಂದ ಏ.12 ಬೆಳಗ್ಗೆ 6 ಗಂಟೆಯವರೆಗೆ ಮದ್ಯ ಮಾರಾಟ ಅಂಗಡಿಗಳನ್ನು ಬಂದ ಮಾಡುವಂತೆ ಆದೇಶ ಹೊರಡಿಸಲಾಗಿದೆ.

ವೈನ್ ಶಾಪ್, ಬಾರ್- ರೆಸ್ಟೋರೆಂಟ್‌ಗಳು, ಕ್ಲಬ್‌ಗಳು, ಹೋಟೇಲ್‌ಗಳಲ್ಲಿ ಮದ್ಯ ಮಾರಾಟ ಸೇರಿದಂತೆ ದಾಸ್ತಾನು ಡಿಸೋಗಳಿಂದ ಸರಬರಾಜನ್ನು ಬಂದ್ ಮಾಡಲು ಆದೇಶಿಸಲಾಗಿದೆ. ಒಂದು ವೇಳೆ ಆದೇಶವನ್ನು ಉಲ್ಲಂಘನೆ ಮಾಡಿದ್ದಲ್ಲಿ ಅಂತವರ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಹೆಚ್ಚುವರಿ ಜಿಲ್ಲಾ ದಂಡಾಧೀಕಾರಿಗಳು ಹಾಗೂ ಪೊಲೀಸ್ ಆಯುಕ್ತರಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 1 ರಿಂದ 10ನೇ ತರಗತಿ ಮಕ್ಕಳಿಗೆ ಮಧ್ಯಾಹ್ನ ಬಿಸಿಊಟದ ಕಾರ್ಯಕ್ರಮ

ಬೆಳಗಾವಿ: 2024-25 ನೇ ಸಾಲಿನ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ 1-10ನೇ ತರಗತಿಗಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಬೇಸಿಗೆ ರಜೆಯಲ್ಲಿ ಮಧ್ಯಾಹ್ನ ಬಿಸಿಯೂಟವನ್ನು ನೀಡಲಾಗುತ್ತದೆ.

2023-24 ನೇ ಸಾಲಿನ ಬೆಳಗಾವಿ ಜಿಲ್ಲೆಯಲ್ಲಿ ಬರಗಾಲ ಪೀಡಿತ 15 ತಾಲೂಕುಗಳಲ್ಲಿ ಘನ ಸರ್ಕಾರದ ಪ್ರಧಾನ ಮಂತ್ರಿ ಪೋಷಣ್ ಶಕ್ತಿ ನಿರ್ಮಾಣ ಯೋಜನೆಯಡಿಯಲ್ಲಿ 1 ರಿಂದ 10ನೇ ತರಗತಿ ಮಕ್ಕಳಿಗೆ ಮಧ್ಯಾಹ್ನ ಬಿಸಿ ಊಟವನ್ನು ನೀಡಲಾಗುತ್ತದೆ.

ಜಿಲ್ಲೆಯಲ್ಲಿ ಒಟ್ಟು 3998 ಸಾಲೆಗಳಿದ್ದು, ಅದರಲ್ಲಿ 3236 ಬಿಸಿಯೂಟ ವಿತರಣಾ ಕೇಂದ್ರಗಳನ್ನು ಗುರುತಿಸಲಾಗಿದೆ.


1575 ಅಡುಗೆ ಕೋಣೆ ಗುರುತಿಸಿ 885 ಶಾಲೆಗಳನ್ನು ಜೊಡಿಸಲಾಗಿದೆ. 806 ಶಾಲೆಗಳಿಗೆ ಸರ್ಕಾರೇತರ ಸಂಘ ಸಂಸ್ಥೆಗಳು, ಮಹಿಳಾ ಸ್ವಸಹಾಯ ಸಂಘಗಳು ಬಿಸಿಯೂಟ ಸರಬರಾಜಯ ಮಾಡಲು ಗುರುತಿಸಲಾಗಿದೆ.

ಒಟ್ಟು 320529 ಮಕ್ಕಳು ಬಿಸಿಯೂಟ ಸೇವಿಸಲು ಒಪ್ಪಿಗೆ ಸೂಚಿಸಿರುತ್ತಾರೆ. 4229 ಅಡುಗೆ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಾರೆ. 2126 ಉಸ್ತುವಾರಿ ಶಿಕ್ಷಕನ್ನು ಗುರುತಿಸಲಾಗಿದೆ. 380 ಉಸ್ತುವಾರಿ ಸಿಬ್ಬಂದಿಯನ್ನು ನೇಮಿಸಲಾಗಿದೆ.

ಬೇಸಿಗೆ ರಜೆಯ ಅವಧಿಯು ಏ.11 ರಿಂದ ಮೇ.28 ರವರೆಗೆ ಒಟ್ಟು 41 ದಿನಗಳ ಅವಧಿಯಲ್ಲಿ ಮಧ್ಯಾಹ್ನ ಉಪಹಾರ ಯೋಜನೆ ಕಾರ್ಯಕ್ರಮದ ಸದುಪಯೋಗವನ್ನು ಪಡೆದುಕೊಳ್ಳಿ ಎಂದು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ರಾಹುಲ್ ಶಿಂಧೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ ವಾರ್ತೆ

**ಮಧುಸೂದನ ಶ್ರೀನಿವಾಸ ಕುಲಕರ್ಣಿ(ಮಾಲದಿನ್ನಿಕರ)**



ಬೆಳಗಾವಿ: ಬೆಳಗಾವಿಯ ಅಜಮನಗರದ ನಿವಾಸಿಗಳಾಗಿದ್ದ ಮಧುಸೂದನ ಶ್ರೀನಿವಾಸ ಕುಲಕರ್ಣಿ(ಮಾಲದಿನ್ನಿಕರ) ಇವರು ಇದೇ ದಿ. 7 ರವಿವಾರದಂದು ಹೃದಯಾಘಾತದಿಂದ ನಿಧನರಾಗಿದ್ದಾರೆ.

ದಿವಂಗತರಿಗೆ 81 ವರ್ಷ ವಯಸ್ಸಾಗಿತ್ತು ಇವರು ಪತ್ನಿ, ಪುತ್ರ, ಪುತ್ರಿ, ಅಪಾರ ಬಂಧು, ಬಳಗವನ್ನಗಲಿದ್ದಾರೆ.

# ದಕ್ಷಿಣ ಭಾರತದ ಪ್ರಮುಖ ವಾಯುಯಾನ ಕೇಂದ್ರವಾಗಿ ಬೆಂಗಳೂರು ಅಭಿವೃದ್ಧಿ

ಬೆಂಗಳೂರು: ಭಾರತದ ಪ್ರಮುಖ ಜಾಗತಿಕ ವಿಮಾನಯಾನ ಸಂಸ್ಥೆ ಏರ್ ಇಂಡಿಯಾ ಮತ್ತು ಬೆಂಗಳೂರು ಇಂಟರ್ನ್ಯಾಷನಲ್ ಏರ್‌ಪೋರ್ಟ್ ಲಿಮಿಟೆಡ್ (ಬಿಐಎಎಲ್) ದಕ್ಷಿಣ ಭಾರತದ ಪ್ರಮುಖ ವಾಯುಯಾನ ಕೇಂದ್ರವಾಗಿ ಬೆಂಗಳೂರನ್ನು ಅಭಿವೃದ್ಧಿಪಡಿಸಲು ಮಹತ್ವದ ಒಪ್ಪಂದ ಮಾಡಿಕೊಂಡಿವೆ, ಈ ಮೂಲಕ ಭಾರತದಲ್ಲಿ ಮುಂದಿನ ಕೆಲವು ವರ್ಷಗಳಲ್ಲಿ ವಿಮಾನಯಾನ ಸಂಪರ್ಕ ಹೆಚ್ಚಿಸುವ ಗುರಿ ಹೊಂದಿದೆ. ಈ ಒಪ್ಪಂದವು ಭಾರತೀಯ ವಾಯುಯಾನ ಉದ್ಯಮದಲ್ಲಿ ಮಹತ್ವದ ಮೈಲಿಗಲ್ಲಾಗಿದೆ.

ಏರ್ ಇಂಡಿಯಾ (ಇತರ ಟಾಟಾ ಗ್ರೂಪ್ ಏರ್‌ಲೈನ್ಸ್ - ಎಐಎಕ್ಸ ಮತ್ತು ವಿಸ್ತಾರಾ ಜೊತೆಗೆ) ಮತ್ತು ಬಿಐಎಎಲ್ ಮುಂದಿನ ಐದು ವರ್ಷಗಳಲ್ಲಿ ಅಂತಾರಾಷ್ಟ್ರೀಯ ಸಂಪರ್ಕ, ಕಾರ್ಯಾಚರಣೆಯ ದಕ್ಷತೆ ಮತ್ತು ಪ್ರಯಾಣಿಕರ ಅನುಭವ ಹೆಚ್ಚಿಸಲು ಸಹಕರಿಸುತ್ತದೆ.

ಇದು ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ (ಕೆಐಎಬಿ) ವರ್ಧಿತ ನೆಟ್‌ವರ್ಕ್ ಮೂಲಕ ಟಾಟಾ ಗ್ರೂಪ್ ಏರ್‌ಲೈನ್ಸ್, ಏರ್ ಇಂಡಿಯಾ ಮತ್ತು ವಿಸ್ತಾರಾ ಪ್ರೀಮಿಯಂ ಹಾಗೂ ಪ್ರಯಾಣಿಕರಿಗೆ ಮೀಸಲಾದ ದೇಶೀಯ ವಿಶ್ರಾಂತಿ ಕೋಣೆ ಸ್ಥಾಪಿಸುವುದು ಸೇರಿದಂತೆ ಇತರೆ ಸೌಕರ್ಯಗಳನ್ನು ಒಳಗೊಂಡಿದೆ.

ಈ ಉಪಕ್ರಮದ ಭಾಗವಾಗಿ, ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಸಮಗ್ರ ನಿರ್ವಹಣೆ, ದುರಸ್ತಿ ಮತ್ತು ಕೂಲಂಕುಷ ಸೌಲಭ್ಯಗಳನ್ನು ಸ್ಥಾಪಿಸಲು ಏರ್ ಇಂಡಿಯಾ ಕರ್ನಾಟಕ ಸರ್ಕಾರದೊಂದಿಗೆ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದೆ. ಇದು ಬೆಂಗಳೂರಿನಲ್ಲಿ ತನ್ನ ಅಸ್ತಿತ್ವವನ್ನು ಬಲಪಡಿಸುವ ಏರ್ ಇಂಡಿಯಾದ ಬದ್ಧತೆಯನ್ನು ಒತ್ತಿಹೇಳುತ್ತದೆ.




ಮುಂದಿನ ದಿನಗಳಲ್ಲಿ ದಕ್ಷಿಣ ಭಾರತದಿಂದ ನೇರ ದೀರ್ಘ-ಪ್ರಯಾಣದ ಮಾರ್ಗಗಳಿಗೆ ಹೆಚ್ಚುತ್ತಿರುವ ಬೇಡಿಕೆ ಪೂರೈಸಲು ತನ್ನ ಜಾಗತಿಕ ಹೆಜ್ಜೆಗುರುತನ್ನು ವಿಸ್ತರಿಸುತ್ತಿದೆ. ಈ ಪಾಲುದಾರಿಕೆಯು ಎಂಆರ್ ಓ ಪರಿಸರ ವ್ಯವಸ್ಥೆಯನ್ನು ಉತ್ತೇಜಿಸುತ್ತದೆ. ಜೊತೆಗೆ, ರಾಜ್ಯದಲ್ಲಿ ಹೆಚ್ಚು ನುರಿತ ವ್ಯಕ್ತಿಗಳಿಗೆ 1,200 ಹೊಸ ಉದ್ಯೋಗಾವ ಕಾಶಗಳನ್ನು ಸೃಷ್ಟಿಸಲು ಯೋಜಿಸಲಾಗಿದೆ.

ಏರ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಕ್ಯಾಂಪ್‌ಬೆಲ್ ವಿಲ್ಸನ್, "ಬೆಂಗಳೂರು ವಾಯು ಸಂಪರ್ಕ ಕೇಂವಿಮಾನ ನಿಲ್ದಾಣದ ಅನುಭೂತಿಯನ್ನು ಇನ್ನಷ್ಟು ಹೆಚ್ಚಿಸಲು ಹಾಗೂ ವಾಯು ಸಂಪರ್ಕವನ್ನು ವಿಸ್ತರಿಸಲು ಮುಂದಾಗಿದ್ದೇವೆ. ಇದಕ್ಕಾಗಿ. ಪ್ರಮುಖ ಎಂಆರ್ ಓ ಕೇಂದ್ರವನ್ನು ನಿರ್ಮಿಸುವ ದೃಷ್ಟಿಯಿಂದ ಐಎಎಲ್ ನೊಂದಿಗೆ ಒಪ್ಪಂದ ಮಾಡಿಕೊಂಡಿದ್ದು,ಈ ಪಾಲುದಾರಿಕೆಯು ಏರ್ ಇಂಡಿಯಾ ಬೆಳವಣಿಗೆಯಲ್ಲಿ ಮಹತ್ವದ ಮೈಲಿಗಲ್ಲಾಗಲಿದೆ ಎಂದರು.

ಬೆಂಗಳೂರು ಇಂಟರ್‌ನ್ಯಾಶನಲ್ ಏರ್‌ಪೋರ್ಟ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಹರಿ ಮರಾರ್ ಮಾತನಾಡಿ, "ಬೆಂಗಳೂರಿ ನಿಂದ ಹೊರಹೋಗುವ ಅರ್ಧದಷ್ಟು ಅಂತಾರಾಷ್ಟ್ರೀಯ ಪ್ರಯಾಣಿಕರು ಮತ್ತು ನಮ್ಮ ಕ್ಯಾಚ್‌ಮೆಂಟ್ ಹೆಡ್ ಟು ಯುರೋಪ್, ಉತ್ತರ ಅಮೇರಿಕಾ, ಆಸ್ಟ್ರೇಲಿಯಾ ಮತ್ತು ಪೂರ್ವಕ್ಕೆ ಹೋಗಬಹುದು, ಏರ್ ಇಂಡಿಯಾದೊಂದಿಗಿನ ನಮ್ಮ ಮೈತ್ರಿಯು ಈ ಗುರಿಯತ್ತ ಗಣನೀಯ ಏರಿಕೆಯನ್ನು ಸಾಧಿಸಲಿದೆ. ಮುಂದಿನ ಐದು ವರ್ಷಗಳಲ್ಲಿ ಬೆಂಗಳೂರು ವಿಮಾನ ನಿಲ್ದಾಣದಿಂದ ದೀರ್ಘ- ಪ್ರಯಾಣದ ಮಾರ್ಗಗಳ ಗಮನಾರ್ಹ ಪಾಲನ್ನು ಹೊಂದುವ ಗುರಿಯನ್ನು ಹೊಂದಿದ್ದೇವೆ" ಎಂದರು.

## ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಪರ ಎಂಎಲ್‌ಸಿ ಪ್ರಕಾಶ ಹುಕ್ಕೇರಿ ಭರ್ಜರಿ ಪ್ರಚಾರ

### ಹೀರೆಕೋಡಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕಾಂಗ್ರೆಸ್ ಕಾರ್ಯಕರ್ತರ ಸಭೆ

ಚಿಕ್ಕೋಡಿ: ದೇಶಕ್ಕೆ ಯುವ ನಾಯಕತ್ವ, ಯುವ ಶಕ್ತಿಯ ಅವಶ್ಯಕತೆ ಇದೆ. ಅದಕ್ಕಾಗಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ತಮ್ಮ ಅಮೂಲ್ಯ ಮತಗಳನ್ನು ನೀಡಿ, ಬಹು ಅಂತರದಿಂದ ಗೆಲ್ಲಿಸಬೇಕೆಂದು ವಿಧಾನ ಪರಿಷತ್ ಸದಸ್ಯರು, ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಪ್ರಕಾಶ ಹುಕ್ಕೇರಿ ಕರೆ ನೀಡಿದರು.




ಚಿಕ್ಕೋಡಿ ಸದಲಗಾ ಮತಕ್ಷೇತ್ರದ ಹೀರೆಕೊಡಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ನೇಜ ಗ್ರಾಮದ ಶ್ರೀ ಕಾಡಸಿದ್ದೇಶ್ವರ ದೇವಸ್ಥಾನದ ಸಮುದಾಯ ಭವನದಲ್ಲಿ ವಿಧಾನ ಪರಿಷತ್ ಸದಸ್ಯರು, ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಪ್ರಕಾಶ ಹುಕ್ಕೇರಿ ಅವರ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಬೃಹತ್ ಸಭೆಯಲ್ಲಿ ಅವರು ಮಾತನಾಡಿದರು.

ಎಲ್ಲೆಡೆ ಕಾಂಗ್ರೆಸ್ ಅಲೆ ಬಿರುಗಾಳಿಯಂತೆ ವ್ಯಾಪಿಸಿದ್ದು, ಜನಪರ ನಿಲುವು ಹೊಂದಿರುವ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಬೇಕೆನ್ನುವ ಜನರ ಉತ್ಸುಕತೆ ಹೆಚ್ಚುತ್ತಿದೆ. ನುಡಿದಂತೆ ನಡೆಯುವ ಕಾಂಗ್ರೆಸ್ ಸರ್ಕಾರವು ಕೇಂದ್ರದಲ್ಲಿ ಅಧಿಕಾರಕ್ಕೆ ಬಂದೇ ಬರಲಿದೆ ಎನ್ನುವ ವಿಶ್ವಾಸ ಇಮ್ಮಡಿಯಾಗಿದೆ.

ಅದಕ್ಕೆ ಕಾರ್ಯಕರ್ತರು ಮತದಾರರಿಗೆ ಕಾಂಗ್ರೆಸ್ ಸರ್ಕಾರದ ಜನಪರ ಯೋಜನೆಗಳನ್ನು ತಿಳಿಸಿ, ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಲು ಮನವಿ ಮಾಡಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಚಿಕ್ಕೋಡಿ ಸದಲಗಾ ಮತಕ್ಷೇತ್ರದ ಹೀರೆಕೊಡಿ, ನಣದಿ, ನಾಗರಾಳ, ಮಲಿಕವಾಡ, ನೇಜ, ಜನವಾಡ, ಶಮನವಾಡಿ ಗ್ರಾಮಗಳ ಕಾಂಗ್ರೆಸ್ ಪಕ್ಷದ ಮುಖಂಡರು, ಜಿಲ್ಲಾ ಪಂಚಾಯತ್ ಸದಸ್ಯರು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಸೇರಿದಂತೆ ಸಾವಿರಾರು ಜನರು ಉಪಸ್ಥಿತರಿದ್ದರು.

## ವಿನಯದಿಂದ ವಿದ್ಯೆಯನ್ನು ಪಡೆಯಲು ಪ್ರಯತ್ನಿಸಬೇಕು: ಆರ್ ಎಸ್ ವಾಲಿಶೆಟ್ಟಿ



ಬೆಳಗಾವಿ: ವಿದ್ಯಾರ್ಥಿ ಜೀವನದಲ್ಲಿ ವಿನಯತೆ, ತಾಳ್ಮೆ, ಜ್ಞಾನ ಪಡೆಯಲೇಬೇಕು ಎನ್ನುವ ಛಲ ಹಾಗೂ ಓದುವ ಹವ್ಯಾಸ ಇರಬೇಕಾದದ್ದು ತುಂಬಾ ಅವಶ್ಯಕವಾಗಿದೆ" ಎಂದು ಹುಕ್ಕೇರಿ ತಾಲೂಕಿನ ಬೆಳವಿ ಸರಕಾರಿ ಪ್ರಾಥಮಿಕ ಕನ್ನಡ ಶಾಲೆಯಲ್ಲಿ ಏಳನೇ ವರ್ಗದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಆರ್ ಎಸ್ ವಾಲಿಶೆಟ್ಟಿ ಅವರು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು ವಿನಯದಿಂದ ವಿದ್ಯೆಯನ್ನು ಪಡೆಯಲು ಪ್ರಯತ್ನಿಸಬೇಕು. ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಸಮಯ ಕಳೆಯುವ ಬದಲು ಪುಸ್ತಕಗಳನ್ನು ಓದುವ ಮತ್ತು ಅಧ್ಯಯನದಲ್ಲಿ ತೊಡಗುವ ಮೂಲಕ ಸಮಯದ ಸದುಪಯೋಗ ಪಡಿಸಿಕೊಳ್ಳಬೇಕು. ಜ್ಞಾನದ ಜೊತೆಗೆ ಆರೋಗ್ಯದ ಕಡೆಗೂ ಮಕ್ಕಳು ಹೆಚ್ಚು ಆಸಕ್ತಿ ವಹಿಸುವಂತೆ ಕಿವಿಮಾತು ಹೇಳಿದರು.

ಏಳನೇ ವರ್ಗದ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ತಮ್ಮ ಅನುಭವಗಳನ್ನು ಹಂಚಿಕೊಂಡರು. ವಿವಿಧ ವಿಭಾಗಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಮತ್ತು ಬಹುಮಾನಗಳನ್ನು ವಿತರಿಸಲಾಯಿತು. ಹಿರಿಯ ಶಿಕ್ಷಕರಾದ ನದಾಫ್ ಅವರು ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕ ಸಂಘದ ಪದಾಧಿಕಾರಿಗಳು, ಪ್ರಧಾನ ಗುರುಗಳು, ಶಿಕ್ಷಕ ಸಿಬ್ಬಂದಿ ವರ್ಗ ಹಾಗೂ ಮುದ್ದು ಮಕ್ಕಳು ಉಪಸ್ಥಿತರಿದ್ದರು.

## ಮತಗಟ್ಟೆ ಅಧಿಕಾರಿಗಳ ತರಬೇತಿ ಕಾರ್ಯಕ್ರಮ

# ಗೊಂದಲಕ್ಕೆ ಆಸ್ಪದ ನೀಡದಂತೆ ಎಚ್ಚರಿಕೆ ವಹಿಸಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ

ಬೆಳಗಾವಿ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮತದಾನ ದಿನದಂದು ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಮತಗಟ್ಟೆ ಅಧಿಕಾರಿಗಳು, ಸಹಾಯಕ ಮತಗಟ್ಟೆ ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತುಕೊಂಡು ಯಾವುದೇ ಗೊಂದಲಕ್ಕೆ ಆಸ್ಪದ ನೀಡದೇ ದಕ್ಷತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ವನಿತಾ ವಿದ್ಯಾಲಯ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಬುಧವಾರ(ಏ.10) ನಡೆದ ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಮತಗಟ್ಟೆ ಅಧಿಕಾರಿಗಳು ಹಾಗೂ ಸಹಾಯಕ ಮತಗಟ್ಟೆ ಅಧಿಕಾರಿಗಳ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮತಗಟ್ಟೆ ಅಧಿಕಾರಿಗಳು, ಸಹಾಯಕ ಮತಗಟ್ಟೆ ಅಧಿಕಾರಿಗಳಿಗೆ ಎರಡು ಹಂತದಲ್ಲಿ ತರಬೇತಿ ನೀಡಲಾಗುವುದು. ಚುನಾವಣಾ ಕರ್ತವ್ಯಕ್ಕೆ ನಿಯೋಜಿತ ಹೊಸಬರು ಏನೇ ಗೊಂದಲಗಳಿದ್ದರೆ ತರಬೇತಿ ಅವಧಿಯಲ್ಲಿಯೇ ತರಬೇತುದಾರರಿಂದ ಮಾಹಿತಿಯನ್ನು ಪಡೆದುಕೊಳ್ಳಬೇಕು. ತರಬೇತಿಗೆ ಸಂಬಂಧಿಸಿದಂತೆ ಸಂಪೂರ್ಣ ಸಚಿತ್ರ ಮಾಹಿತಿಯನ್ನು ಹೊಂದಿರುವ ಸಾಫ್ಟ್ ಕಾಪಿ ಹಾಗೂ ಪುಸ್ತಕ ನೀಡಲಾಗುವುದು.

**ಅಣಕು ಮತದಾನ-ಎಚ್ಚರಿಕೆ ವಹಿಸಲು ಸೂಚನೆ:**

ಅಣಕು ಮತದಾನ ಆದ ಬಳಿಕ ಸ್ಲಿಪ್ ಗಳನ್ನು ತೆಗೆಯುವುದು ಕಡ್ಡಾಯವಾಗಿರುತ್ತದೆ. ಒಂದು ವೇಳೆ ಅಣಕು ಮತದಾನದ ಸ್ಲಿಪ್ ತೆಗೆಯದಿದ್ದರೆ ಮತ ಎಣಿಕೆ ವೇಳೆ ಗೊಂದಲ ಉಂಟಾಗುತ್ತದೆ.

ಆದ್ದರಿಂದ ಅಣಕು ಮತದಾನ ಬಳಿಕ ಕಡ್ಡಾಯವಾಗಿ ನಿಯಮಾನುಸಾರ ಇವಿಎಂ ಕ್ಲಿಯರ್ ಮಾಡುವುದರ ಜತೆಗೆ ಮತಗಟ್ಟೆ ಅಧಿಕಾರಿಗಳು ಹಾಗೂ ಏಜೆಂಟರಿಂದ ಸಹಿ ಪಡೆದುಕೊಳ್ಳಬೇಕು.

ಮತದಾನ ದಿನದಂದು ಚುನಾವಣಾ ಕರ್ತವ್ಯಕ್ಕೆ ನಿಯೋಜಿತರಾಗಿರುವ ಪ್ರತಿಯೊಬ್ಬ ಅಧಿಕಾರಿ/ಸಿಬ್ಬಂದಿ ಕಡ್ಡಾಯವಾಗಿ ಮತದಾನ ಮಾಡಬೇಕು. ಇದಕ್ಕಾಗಿ ನಿಗದಿತ ಅಂಚೆ ಮತದಾನ ನಮೂನೆಗಳನ್ನು ತರಬೇತಿ ಸಂದರ್ಭದಲ್ಲಿಯೇ ಭರ್ತಿ ಮಾಡಿ ಕೊಡಬೇಕು ಎಂದು ತಿಳಿಸಿದರು.



ಚುನಾವಣಾ ಕರ್ತವ್ಯಕ್ಕೆ ನಿಯೋಜಿತ ಅಧಿಕಾರಿ/ಸಿಬ್ಬಂದಿಯಿಂದ ಅಂಚೆ ಮತದಾನಕ್ಕೆ ನಿಗದಿತ ನಮೂನೆ(ಫಾರ್ಮ್ 12 ಹಾಗೂ 12 ಎ) ಗಳನ್ನು ಸಂಗ್ರಹ ಪ್ರಕ್ರಿಯೆಯನ್ನು ಹಾಗೂ ಇಡಿಸಿ(ಎಲೆಕ್ಷನ್ ಡ್ಯೂಟಿ ಸರ್ಟಿಫಿಕೇಟ್) ನೀಡುವ ಪ್ರಕ್ರಿಯೆಯನ್ನು ಪರಿಶೀಲಿಸಿದರು.

ಎಲ್ಲರಿಗೂ ಮತದಾನ ಮಾಡಲು ಅನುಕೂಲವಾಗುವಂತೆ ಸೌಲಭ್ಯವನ್ನು ಚುನಾವಣಾ ಆಯೋಗ ಕಲ್ಪಿಸಿದೆ ಆದ್ದರಿಂದ ತಪ್ಪದೇ ಮತದಾನ ಮಾಡುವಂತೆ ತಿಖಿಸಿದರು.

ಇದೇ ವೇಳೆ ಎಲೆಕ್ಟ್ರಾನಿಕ್ ಮತಯಂತ್ರ ಜೋಡಣೆ, ಬಳಕೆಯ ವಿಧಾನಗಳ ಕುರಿತು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸ್ವತಃ ಪ್ರಾತ್ಯಕ್ಷಿಕೆ ತೋರಿಸಿದರು. ಕಂಟ್ರೋಲ್ ಯುನಿಟ್, ಬ್ಯಾಲೆಟ್ ಯುನಿಟ್ ಮತ್ತು ವಿವಿಪ್ಯಾಟ್ ಗಳ ಜೋಡಣೆ ಮಾಡುವಾಗ ಜಾಗರೂಕತೆ ವಹಿಸಬೇಕು.

ಏನಾದರೂ ಗೊಂದಲಗಳಿದ್ದರೆ ತರಬೇತಿ ಸಂದರ್ಭದಲ್ಲಿಯೇ ಬಗೆಹರಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಶಕೀಲ್ ಅಹ್ಮದ್ ಹಾಗೂ ತಹಶೀಲ್ದಾರ ಸಿದ್ದರಾಯ ಭೋಸಗಿ ಮತ್ತಿತರರು ಉಪಸ್ಥಿತರಿದ್ದರು. ನಂತರ ಬಿ.ಕೆ. ಮಾಡೆಲ್ ಶಾಲೆಯಲ್ಲಿ ನಡೆದಿರುವ ಬೆಳಗಾವಿ ಉತ್ತರ ಮತ್ತು ಗ್ರಾಮೀಣ ಮತಕ್ಷೇತ್ರಗಳ ಮತಗಟ್ಟೆ ಅಧಿಕಾರಿಗಳು ಹಾಗೂ ಸಹಾಯಕ ಮತಗಟ್ಟೆ ಅಧಿಕಾರಿಗಳ ತರಬೇತಿ ಕಾರ್ಯಕ್ರಮವನ್ನು ಕೂಡ ಪರಿಶೀಲಿಸಿದರು.

ಸಹಾಯಕ ಚುನಾವಣಾಧಿಕಾರಿ ಪಿ.ಎನ್.ಲೋಕೇಶ್ ಮತ್ತಿತರರು ಉಪಸ್ಥಿತರಿದ್ದರು.

**ಸ್ಟ್ರಾಂಗ್ ರೂಮ್ ಪರಿಶೀಲನೆ:**

ಇದಾದ ಬಳಿಕ ಬೆಳಗಾವಿ ಉತ್ತರ ಹಾಗೂ ದಕ್ಷಿಣ ವಿಧಾನಸಭಾ ಮತಕ್ಷೇತ್ರದ ಮಸ್ಟರಿಂಗ್ ಹಾಗೂ ಡಿಮಸ್ಟರಿಂಗ್ ಕೇಂದ್ರವಾಗಿರುವ ಬಿ.ಕೆ.ಮಾಡೆಲ್ ಶಾಲೆಯಲ್ಲಿರುವ ಸ್ಟ್ರಾಂಗ್ ರೂಮ್ ಗಳನ್ನು ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಅವರು ಪರಿಶೀಲಿಸಿದರು.

ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ನಿರಂತರವಾಗಿ ಬಿಗಿಭದ್ರತೆ ಒದಗಿಸಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಹಾಯಕ ಚುನಾವಣಾಧಿಕಾರಿ ಪಿ.ಎನ್.ಲೋಕೇಶ್ ಮತ್ತಿತರರು ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089